ಸಂಪುಟ : 10 ಸಂಚಿಕೆ: 83 ಪುಟ : 4+2 ಬೆಲೆ: 3.00 ಗುರುವಾರ ಮೇ 01 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 83 Pages : 4+2 Price : 3.00 Thursday May 01 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಪಹಲ್ಗಾಮ್ ದಾಳಿ ಬೆನ್ನಲ್ಲೇ ಜಾತಿಗಣತಿ ಯಾಕೆ?

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಪಹಲ್ಗಾಮ್ ದಾಳಿ ಬೆನ್ನಲ್ಲೇ ಕೇಂದ್ರ ಸರ್ಕಾರ ಜಾತಿಗಣತಿ ನಿರ್ಧಾರಕ್ಕೆ ಬಂದಿರುವುದು ಯಾಕೆ ಎಂದು ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ ಪ್ರಶ್ನಿಸಿದರು.

ಕೇಂದ್ರದ ಜಾತಿ ಜನಗಣತಿ ನಿರ್ಧಾರ ಸ್ವಾಗತಿಸಿ ಮಾತನಾಡಿದ ರಾಗಾ, ಪಹಲ್ಗಾಮ್ ದಾಳಿಯ ಸಮಯದಲ್ಲೇ ಜಾತಿ ಜನಗಣತಿ ಘೋಷಣೆ ನಿರ್ಧಾರ ಯಾಕೆ ಮಾಡಿದ್ದಾರೆ ಎನ್ನುವುದು ನಂಗೆ ಗೊತ್ತಿಲ್ಲ. ಅದರ ಬಗ್ಗೆ ನಾನು ಮಾತನಾಡುವುದಿಲ್ಲ. ಸರ್ಕಾರ ದೊಡ್ಡ ನಿರ್ಧಾರ ತೆಗೆದುಕೊಂಡಿದೆ. ಇದು ಜನರ ಜಾತಿಗಣತಿ ಆಗಬೇಕು, ಅಧಿಕಾರಿಗಳ ಗಣತಿ ಆಗಬಾರದು. ಇದನ್ನು ಹೇಗೆ ಮಾಡ್ತಾರೆ ಎಂದು ಹೇಳಬೇಕು ಎಂದರು. ಪ್ರಧಾನಿ ಮೋದಿ ಅವರು ಕೇವಲ 4 ಜಾತಿಗಳು ಎಂದಿದ್ದರು. ಈಗ ಏಕಾಏಕಿ ಜಾತಿಗಣತಿ ಬಗ್ಗೆ ಘೋಷಣೆ ಮಾಡಿದ್ದಾರೆ. ಕೇವಲ ಮೀಸಲಾತಿ ಪ್ರಾಮುಖ್ಯತೆ ನೀಡುವುದಲ್ಲ. ಪ್ರತಿಯೊಬ್ಬರಿಗೆ ನ್ಯಾಯ ಸಿಗುವಂತೆ ಮಾಡಬೇಕಾಗಿದೆ ಎಂದು ಹೇಳಿದರು.

ಜಾತಿಗಣತಿ ಹಾಗೂ ಜನಗಣತಿಗೆ ಅವಧಿ, ಸಮಯ ನಿರ್ಧಾರ ಮಾಡಬೇಕು. ಬಜೆಟ್‌ನಲ್ಲಿ ಹಣವನ್ನು ನಿಗದಿಪಡಿಸಬೇಕು. ಬಜೆಟ್‌ನ್ನು ಹಣ ತೆಗೆದಿರಿಸುವ ಬಗ್ಗೆ ಮಾಹಿತಿ ನೀಡಬೇಕು. ನಮ್ಮ ಆಗ್ರಹ, ಒತ್ತಡಕ್ಕೆ ಪ್ರಧಾನಿ ಮೋದಿ ಅವರು ಸ್ಪಂದಿಸಿದಕ್ಕೆ ಅವರಿಗೆ ಧನ್ಯವಾದಗಳು ಎಂದು ಕೃತಜ್ಞತೆ ಸಲ್ಲಿಸಿದರು. ನಮ್ಮ ಪಕ್ಷ ಸಮೀಕ್ಷೆಗೆ ಆಗ್ರಹಿಸಿ ದೇಶದಲ್ಲೆಡೆ ಅಭಿಯಾನ ಆರಂಭಿಸಿದ್ದೆವು. ಜಾತಿಗಣತಿಯಿಂದಾಗಿ ಅಭಿವೃದ್ಧಿಗೆ ಹಲವು ದಾರಿಗಳು ತೆರಯುತ್ತವೆ. ಕರ್ನಾಟಕದ ಜಾತಿಗಣತಿ ಮುಂದಿನ ದಿನಗಳಲ್ಲಿ ಮಾದರಿಯಾಗಲಿದೆ. ಪ್ರಧಾನಿ ಮೋದಿ ಕೈಗೊಂಡ ನಿರ್ಧಾರ ಮಹತ್ವದಾಗಿದೆ ಎಂದರು.

**ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವೇಶ್ವರ ಜಯಂತಿಗೆ ಚಾಲನೆ ನೀಡಿದ ಸಚಿವ ಎಚ್.ಕೆ. ಪಾಟೀಲ**

# ಬಸವೇಶ್ವರರು ಸಮಾಜ ಸುಧಾರಣೆಯ ದಾರಿದೀಪ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವೇಶ್ವರರ ತತ್ವ-ವಿಚಾರಗಳನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಸಚಿವ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಗದಗ ನಗರದ ಪೂಜ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಶಿವಾನುಭವ ಮಂಟಪದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಬುಧವಾರ ಆಯೋಜಿಸಲಾಗಿದ್ದ ಕರ್ನಾಟಕದ ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರ ಜಯಂತಿ-2025 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಕೆಲವು ರಾಜ್ಯಗಳಲ್ಲಿ ಶಾಂತಿ ಭಂಗವಾಗುತ್ತಿರುವುದನ್ನು ಉದಾಹರಿಸಿದ ಸಚಿವರು, ಕರ್ನಾಟಕದಲ್ಲಿ ಶಾಂತಿಯುತ ಜೀವನ ಸಾಧ್ಯವಾಗಿರುವುದು ಬಸವ ತತ್ವಗಳ ಪ್ರಭಾವವೆಂದು ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.



> ಬಸವಣ್ಣನವರು ಶೋಷಣೆಗೆ ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಶ್ರೇಣೀಕೃತ ವ್ಯವಸ್ಥೆಯನ್ನು ವಿರೋಧಿಸಿದರು. ಅವರ ಆಲೋಚನೆ ಮತ್ತು ಹೋರಾಟಗಳು ಸಮಾಜ ಸುಧಾರಣೆಗೆ ದಾರಿದೀಪವಾಗಿವೆ. ಬಸವಣ್ಣನವರ ತತ್ವ ಹಾಗೂ ಭಾರತೀಯ ಸಂವಿಧಾನದ ಆಶಯ ಒಂದೇ ಆಗಿದ್ದು, ಇದನ್ನು ನಾವು-ನೀವೆಲ್ಲರೂ ಅರಿಯಬೇಕಾಗಿದೆ.
>
> **- ಎಚ್.ಕೆ. ಪಾಟೀಲ.**
>
> ಜಿಲ್ಲಾ ಉಸ್ತುವಾರಿ ಸಚಿವರು.

ಪೂಜ್ಯ ಶಾಂತಲಿಂಗ ಮಹಾಸ್ವಾಮಿಗಳು (ಶಿರೊಳ ತೋಂಟದಾರ್ಯ ಮಠ ಮತ್ತು ಬೈರನಹಟ್ಟಿ ವಿರಕ್ತಮಠ) ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಪ್ರಾಸ್ತಾವಿಕವಾಗಿ ಮಾತನಾಡಿ, ಬಸವಣ್ಣನವರು ಮನುಷ್ಯ-ಮನುಷ್ಯರ ನಡುವೆ ಸಮಾನತೆಯ ದೃಷ್ಟಿಕೋನ ಹೊಂದಿ, ಸಮಾಜದಲ್ಲಿ ಸಮಾನತೆಯ ಜಾಗೃತಿ ಮೂಡಿಸಿದ್ದಾರೆ ಎಂದರು.

'ಬಸವ ಬೆಳಕು' ಎಂಬ ಕವನ ಸಂಕಲನ ರೂಪದ ಬಸವಣ್ಣನವರ ಕುರಿತ ಕಿರು ಪುಸ್ತಕವನ್ನು ಸಚಿವ ಎಚ್.ಕೆ. ಪಾಟೀಲ ಮತ್ತು ಉಪಸ್ಥಿತರಿದ್ದ ಗಣ್ಯರು ಬಿಡುಗಡೆ ಮಾಡಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಮಾಜಿ ಸಚಿವ ಎಸ್.ಎಸ್. ಪಾಟೀಲ, ಕೃಷ್ಣಾ ಪರಾಪುರ, ಎಸ್.ಎಸ್. ಪಟ್ಟಣಶೆಟ್ಟರ್, ಬಾಲಚಂದ್ರ ಭರಮಗೌಡ್ರ, ನಾಗೇಶ್ ಸವಡಿ, ಎಸ್.ಎನ್. ಬಳ್ಳಾರಿ, ಜೋಗಣ್ಣವರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಎಸಿ ಗಂಗಪ್ಪ ಎಂ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಪ್ರೊ. ಬಾಹುಬಲಿ ಜೈನರ್ ಕಾರ್ಯಕ್ರಮ ನಿರೂಪಿಸಿದರು.

> ಶರಣ ತತ್ವ ಚಿಂತಕ ಜಿ.ಎಸ್. ಪಾಟೀಲ ವಿಶೇಷ ಉಪನ್ಯಾಸ ನೀಡುತ್ತಾ, 12ನೇ ಶತಮಾನದಲ್ಲಿ ಬಸವಣ್ಣನವರು ಲಿಂಗ, ಆರ್ಥಿಕ, ಧಾರ್ಮಿಕ ಅಸಮಾನತೆಗಳ ವಿರುದ್ಧ ಹೋರಾಡಿದರು. ಅವರ ತತ್ವಗಳನ್ನು ಸಾಮಾನ್ಯರಿಗೆ ತಲುಪಿಸುವಲ್ಲಿ ನಾವು ಇನ್ನೂ ಹೆಚ್ಚು ಪ್ರಯತ್ನಶೀಲರಾಗಬೇಕು ಎಂದು ಕರೆ ನೀಡಿದರಲ್ಲದೆ, ಅಲ್ಲಮಪ್ರಭುದೇವರು ಶರಣ ಪರಂಪರೆಯ ನಾನಾ ವಿಧಗಳನ್ನು ಒಗ್ಗೂಡಿಸಿದ ಮಹಾಪುರುಷರಾಗಿ, 16ನೇ ಶತಮಾನದಲ್ಲಿ ಯಡಿಯೂರಿನ ಶ್ರೀಗಳು ಶರಣ ಚಳವಳಿಗೆ ನಾಂದಿ ಹಾಡುವ ಮೂಲಕ ಮುಂಚೂಣಿಯಲ್ಲಿದ್ದರು ಎಂದರು.





> ಗದುಗಿನ ಡಿ. ದೇವರಾಜ ಅರಸು ಭವನದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿ ರವಿ ಎಲ್.ಗುಂಜೀಕರ ಅವರ ನಿವೃತ್ತಿಯ ನಿಮಿತ್ತ ವನಮಹೋತ್ಸವ ಹಾಗೂ ಬಸವ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಮಣಕವಾಡದ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು 60 ಸಸಿಗಳನ್ನು ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ, ಅರಣ್ಯಾಧಿಕಾರಿ ಜಯರಾಮ, ಅರುಣಕುಮಾರ ಚವ್ಹಾಣ ಸೇರಿದಂತೆ ಗುಂಜೀಕರ ಅವರ ಅಭಿಮಾನಿಗಳು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

**ರವಿ ಗುಂಜೀಕರ ನಿವೃತ್ತಿ ನಿಮಿತ್ತ ಸಸಿ ನೆಡುವ ಕಾರ್ಯಕ್ರಮ, ಬಸವಜಯಂತಿ ಆಚರಣೆಯಲ್ಲಿ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು**

# ರವಿ ಗುಂಜೀಕರ ಅಪರೂಪದ ವ್ಯಕ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಾಮಾನ್ಯವಾಗಿ ನಿವೃತ್ತಿ ಕಾರ್ಯಕ್ರಮಗಳು ಕುಟುಂಬ ವರ್ಗಕ್ಕೆ, ಆಪ್ತರಿಗೆ ಮಾತ್ರ ಸೀಮಿತವಾಗಿರುತ್ತವೆ. ಆದರೆ ರವಿ ಗುಂಜೀಕರ ಅವರ ಅಭಿಮಾನಿ ಬಳಗ ಅವರ ನಿವೃತ್ತಿಯ ನಿಮಿತ್ತ ಹಮ್ಮಿಕೊಂಡ ಜನೋಪಯೋಗಿ ಕಾರ್ಯಕ್ರಮಗಳನ್ನು ನೋಡಿದರೆ ಇದು ನಿಜವಾಗಿಯೂ ಸಾರ್ಥಕ ಹಾಗೂ ಮಾದರಿ ನಿವೃತ್ತಿ ಸಮಾರಂಭವಾಗಿದೆ ಎಂದು ಮಣಕವಾಡದ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು ನುಡಿದರು.

ಅವರು ಬುಧವಾರ ನಗರದ ಡಿ. ದೇವರಾಜ ಅರಸು ಭವನದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿಗಳು ಹಾಗೂ ಸರ್ಕಾರಿ ನೌಕರರ ಸಂಘದ ನಿಕಟಪೂರ್ವ ಅಧ್ಯಕ್ಷರಾದ ರವಿ ಎಲ್. ಗುಂಜೀಕರ ಅವರ ನಿವೃತ್ತಿ ನಿಮಿತ್ತ ಅವರ ಅಭಿಮಾನಿ ಬಳಗ ಹಮ್ಮಿಕೊಂಡಿದ್ದ ಸಸಿ ನೆಡುವ ಕಾರ್ಯಕ್ರಮ ಹಾಗೂ ಬಸವಜಯಂತಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಸರ್ಕಾರಿ ಸೇವೆಯನ್ನು ಜನಸೇವೆ ಎಂದು ಭಾವಿಸಿ ಅನೇಕ ಹಿಂದುಳಿದ ಜನರು, ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳಿಗೆ ನೆರವಾದ ರವಿ ಗುಂಜೀಕರ ತಾವು ಸಮಾಜದ ಋಣ ಇಟ್ಟುಕೊಳ್ಳದೇ ಸಮಾಜದ ಮೇಲೆ ಋಣ ಹೊರಿಸಿರುವ ಅಪರೂಪದ ವ್ಯಕ್ತಿ. ಬಸವ ಜಯಂತಿ ಹಾಗೂ ಅಕ್ಷಯ ತೃತೀಯದ ಈ ಶುಭದಿನದಂದು 60 ಸಸಿಗಳನ್ನು ನೆಟ್ಟಿರುವುದು ಶ್ಲಾಘನೀಯ ಎಂದರು.



ಇಂದಿನ ದಿನಗಳಲ್ಲಿ ಗಿಡ-ಮರ ಉಳಿಸಿ ಬೆಳಸುವ ಅನಿವಾರ್ಯತೆ ಹೆಚ್ಚಿದೆ. ಆರು ದಿನಗಳ ಕಾಲ ಹಮ್ಮಿಕೊಂಡಿರುವ ರಕ್ತದಾನ, ಪೌರಕಾರ್ಮಿಕರಿಗೆ ಸನ್ಮಾನ, ಮಹಿಳಾ ದಿನಾಚರಣೆ, ಶಾಲೆ ದತ್ತು ಸ್ವೀಕಾರ ಕಾರ್ಯಕ್ರಮಗಳು ವೈಶಿಷ್ಟ್ಯಪೂರ್ಣವಾಗಿದ್ದು, ಸಂಪೂರ್ಣ ಯಶಸ್ಸು ಕಾಣಲಿ ಎಂದು ಹಾರೈಸಿದ ಅವರು ನಿವೃತ್ತಿ ನಂತರ ಗುಂಜೀಕರ ಅವರು ಇನ್ನೂ ಹೆಚ್ಚು ಸಮಾಜಮುಖಿಯಾಗಲಿ ಆಶಿಸಿದರು.

ಅರಣ್ಯ ಇಲಾಖೆ ಅಧಿಕಾರಿ ಜಯರಾಮ ಮಾತನಾಡಿ, ರವಿ ಗುಂಜೀಕರ ಅವರ ನಿವೃತ್ತಿ ಅಂಗವಾಗಿ 60 ಸಸಿಗಳನ್ನು ನೆಡುವ ಕಾರ್ಯಕ್ರಮ ಹಮ್ಮಿಕೊಂಡಿದ್ದು ಸಂತಸ ತಂದಿದ್ದು, ಈ ಭಾಗದಲ್ಲಿ ಜನ್ಮದಿನದಂತಹ ವಿಶೇಷ ಕಾರ್ಯಕ್ರಮಗಳಲ್ಲಿ ಸಸಿ ನೆಡುವ ನಿರ್ಣಯ ಕೈಗೊಂಡರೆ ಅದಕ್ಕೆ ಅರಣ್ಯ ಇಲಾಖೆ ಸಹಾಯ-ಸಹಕಾರ ನೀಡುತ್ತದೆ. ಕೇವಲ ಸಸಿಗಳನ್ನು ಹಚ್ಚುವುದಷ್ಟೇ ಮುಖ್ಯವಲ್ಲ, ಅವುಗಳನ್ನು ಪೋಷಿಸುವುದು ಅವಶ್ಯವಾಗಿದೆ ಎಂದರು.

ಶಿವಯೋಗಿ ಬಂಡಿ ಹಾಗೂ ಹಿರೇಮಠ ರವಿ ಗುಂಜೀಕರ ಅವರ ನಿವೃತ್ತಿ ಜೀವನಕ್ಕೆ ಶುಭ ಹಾರೈಸಿದರು. ಕೆ.ಎಫ್. ಹಳ್ಯಾಳ, ಎಂ.ಎಂ. ಹಣಸಿ, ಎಚ್.ವೈ. ಸಂದಕದ, ಬಸವರಾಜ ಗದಗಿನ, ಆರ್.ಎಂ. ಲಿಂಬನಾಯಕ, ಎಸ್.ಎಸ್. ಪಾಟೀಲ, ಜಿ.ಎನ್. ಮಲ್ಲೂರ, ಬಸವರಾಜ ದೇಸಾಯಿ, ಅರುಣಕುಮಾರ ಚವ್ಹಾಣ, ಎಂ.ಎಂ. ನಿಟ್ಟಳ್ಳಿ, ಲಕ್ಷ್ಮಣರೆಡ್ಡಿ ಮುಧೋಳ, ತಿಪ್ಪಣ್ಣವರ ಸೇರಿದಂತೆ ರವಿ ಗುಂಜೀಕರ ಅಭಿಮಾನಿ ಬಳಗದ ಸದಸ್ಯರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ ನಿರೂಪಿಸಿದರು.

> ನೌಕರರು ನಿವೃತ್ತಿಯಾಗುವುದು ಸಹಜ. ಆದರೆ ನಿವೃತ್ತಿ ಕಾರ್ಯಕ್ರಮಗಳು ಸಮಾಜಮುಖಿ ನೆಲೆಗಟ್ಟಿನಲ್ಲಿ ವಿಧಾಯಕವಾಗಿ ನಡೆಯಬೇಕು ಎನ್ನುವ ಚಿಂತನೆಯಿಂದ ನನ್ನ ಅಭಿಮಾನಿ ಬಳಗದವರು ಆರು ದಿನಗಳ ಕಾಲ ದಿನವೂ ಒಂದು ಉತ್ಕೃಷ್ಟ-ಅರ್ಥಪೂರ್ಣ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಮೊದಲ ದಿನದಂದು ಅಭಿನವ ಮೃತ್ಯುಂಜಯ ಶ್ರೀಗಳಿಂದ ಸಸಿ ನೆಡುವ ಕಾರ್ಯಕ್ರಮದ ಮೂಲಕ ಚಾಲನೆ ಸಿಕ್ಕಿರುವುದು ಸಂತಸ ತಂದಿದೆ
>
> **- ರವಿ ಎಲ್.ಗುಂಜೀಕರ.**
>
> ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮಾಜಿ ಜಿಲ್ಲಾಧಿಕಾರಿ.

**ಭೀಷ್ಮ ವಿಹಾರ ಧಾಮದಲ್ಲಿ 'ಸಂಗೀತ ಸುಧೆ' ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಚಿವ ಎಚ್.ಕೆ. ಪಾಟೀಲ**

# ಭೀಷ್ಮಕೆರೆಯಲ್ಲಿ ಶೀಘ್ರ ಸೈಕ್ಲಿಂಗ್ ವ್ಯವಸ್ಥೆ



■ವಿಜಯಸಾಕ್ಷಿ ಸುದ್ದಿ, ಗದಗ

ಐತಿಹಾಸಿಕ ಭೀಷ್ಮ ಕೆರೆ ಪರಿಸರದಲ್ಲಿ ಅನೇಕ ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವ ಮೂಲಕ ಸುಂದರ ವಿಹಾರ ಧಾಮವನ್ನಾಗಿ ಮಾಡಲಾಗಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ ಹಾಗೂ ಪ್ರವಾಸೋದ್ಯಮ ಇಲಾಖೆ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಬುಧವಾರ ನಗರದ ಭೀಷ್ಮ ವಿಹಾರ ಧಾಮದ ನಡುಗಡ್ಡೆಯಲ್ಲಿ ಬಸವ ಜಯಂತಿ ನಿಮಿತ್ತ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ-ಬೆಟಗೇರಿ ನಗರಸಭೆ ಸಹಯೋಗದಲ್ಲಿ ಬಸವ ಜಯಂತಿ ಅಂಗವಾಗಿ ಸಂಗೀತಗಾರ ರಾಮಚಂದ್ರ ಹಡಪದ, ಸ್ಪರ್ಶ ಇವರ ತಂಡದಿಂದ ಆಯೋಜಿಸಲಾದ ಸಂಗೀತ ಸಂಜೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಸಚಿವರು ಮಾತನಾಡಿದರು.

> ಬಸವ ಜಯಂತಿಯಂದು ಭೀಷ್ಮ ಕೆರೆ ಆವರಣ ಇಷ್ಟೊಂದು ಸುಂದರವಾಗಲು ಪ್ರಭು ಬುರಬುರೆ, ಬಿ.ಬಿ. ಅಸೂಟಿ, ಗುರಣ್ಣ ಬಳಗಾನೂರ ಸೇರಿದಂತೆ ಹಲವರ ಆಸಕ್ತಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿದಂತೆ ಹಲವಾರು ಅಧಿಕಾರಿಗಳ ಅವಿರತ ಶ್ರಮ ಅಡಗಿದೆ. ಅವರ ಜೊತೆಗೆ ಶ್ರಮಿಸಿದ ಎಲ್ಲ ಅಧಿಕಾರಿಗಳು, ಸಿಬ್ಬಂದಿಗಳಿಗೆ ಅಭಿನಂಧನೆಗಳನ್ನು ಸಲ್ಲಿಸುತ್ತೇನೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.


ಭೀಷ್ಮ ಕೆರೆ ಆವರಣದಲ್ಲಿ ಈಗಾಗಲೇ ಬೋಟಿಂಗ್ ಆರಂಭವಾಗಿದ್ದು, ಪ್ರತಿನಿತ್ಯ 15 ಸಾವಿರ ಆದಾಯ ಸೃಷ್ಟಿಯಾಗುತ್ತಿದೆ. ಹೀಗಾಗಿ ಭೀಷ್ಮ ವಿಹಾರ ಧಾಮವನ್ನು ಮತ್ತಷ್ಟು ಆಕರ್ಷಣೀಯವಾಗಿಸಲು ಮೇ 20ರಂದು ಕೆರೆ ನೀರಿನ ಮೇಲೆ ಓಡುವ ಸೈಕಲ್ ಸವಾರಿ ಆರಂಭಿಸಲಾಗುವುದು ಎಂದರು.

ಐತಿಹಾಸಿಕ 63 ಎಕರೆ ಕೆರೆ ಅಭಿವೃದ್ಧಿ ಮಾಡಲು ಅವಕಾಶವಿದೆ. ಸದ್ಯ 33 ಎಕರೆ ಮಾತ್ರ ಅಭಿವೃದ್ಧಿ ಮಾಡಲಾಗಿದೆ. ಸರಕಾರದ ವಿವಿಧ ಇಲಾಖೆಗಳ ಜೊತೆಗೆ ಸಾರ್ವಜನಿಕರೂ ಅಭಿವೃದ್ಧಿಗೆ ಕೈ ಜೋಡಿಸಬೇಕು. ಅಂದಾಗ ಮಾತ್ರ ವಿಹಾರಧಾಮ ಮತ್ತಷ್ಟು ಸುಂದರವಾಗಲು ಸಾಧ್ಯ ಎಂದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಪ್ರಾಸ್ತಾವಿಕ ಮಾತನಾಡಿ, 116 ಅಡಿ ಎತ್ತರದ ಬಸವ ಪುತ್ಥಳಿ ಆವರಣದಲ್ಲಿ ಬಸವ ಜಯಂತಿ ಅಂಗವಾಗಿ ಸಂಗೀತ ಸಂಜೆ ಕಾರ್ಯಕ್ರಮ ಆಯೋಜಿಸುವ ಮೂಲಕ ಬಸವ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಗಿದೆ ಎಂದರು.

ಸಮಾರಂಭದಲ್ಲಿ ಹೆಸರಾಂತ ಕಲಾವಿದ ರಾಮಚಂದ್ರ ಹಡಪದ್ ಅವರನ್ನು ಸಚಿವ ಎಚ್.ಕೆ. ಪಾಟೀಲ ಜಿಲ್ಲಾಡಳಿತದಿಂದ ಸತ್ಕರಿಸಿ ಗೌರವಿಸಿದರು. ಜೊತೆಗೆ ಸ್ಪರ್ಶ ಕಲಾತಂಡದ ಸರ್ವ ಸದಸ್ಯರನ್ನು ಗೌರವಿಸಲಾಯಿತು.

ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ಡಿ.ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯ ಬಸವರಾಜ ಕಡೇಮನಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮುಂತಾದವರಿದ್ದರು. ಪ್ರೊ. ಬಾಹುಬಲಿ ಜೈನರ್ ಕಾರ್ಯಕ್ರಮ ನಿರೂಪಿಸಿದರು.




ಗದಗ: ನಗರದ ಹತ್ತಿಕಾಳು ಕೂಟದ ಬಸವೇಶ್ವರ ವೃತ್ತದಲ್ಲಿನ ಶ್ರೀ ಬಸವೇಶ್ವರ ಪುತ್ಥಳಿಗೆ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ ಹಾಗೂ ಪ್ರವಾಸೋದ್ಯಮ ಇಲಾಖೆ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರು ಮಾಲಾರ್ಪಣೆ ಮಾಡಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಡಿ ಆರ್ ಪಾಟೀಲ, ಬಿ ಬಿ ಅಸೂಟಿ, ಅಶೋಕ ಮಂದಾಲಿ, ಬಸವರಾಜ್ ಕಡೇಮನಿ ಸೇರಿದಂತೆ ಗಣ್ಯರು ಹಾಜರಿದ್ದರು.

ಗದಗ: ನಗರದ ಭೀಷ್ಮ ವಿಹಾರ ಧಾಮದ ನಡುಗಡ್ಡೆಗೆ ಕೂಡುವ ಸೇತುವೆಯನ್ನು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ ಹಾಗೂ ಪ್ರವಾಸೋದ್ಯಮ ಇಲಾಖೆ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಉದ್ಘಾಟನೆಗೊಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಬಿ ಬಿ ಅಸೂಟಿ, ಗುರಣ್ಣ ಬಳಗಾನೂರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.



## ಸಂಪಾದಕೀಯ

# ಜನಗಣತಿ ಮತ್ತು ಜಾತಿಗಣತಿ: ಸ್ವಾಗತಾರ್ಹ ನಡೆ

ಭಾರತವು ಬಹುತ್ವ ಸಂಸ್ಕೃತಿ ಮತ್ತು ವೈವಿಧ್ಯಮಯ ಜನಸಂಖ್ಯೆಯನ್ನು ಹೊಂದಿರುವ ರಾಷ್ಟ್ರ. ಕಾಲಕಾಲಕ್ಕೆ ನಡೆಯುವ ಜನಗಣತಿಯು ಈ ವೈವಿಧ್ಯತೆಯ ಕುರಿತು ಅಧಿಕೃತ ಮಾಹಿತಿಯನ್ನು ಒದಗಿಸುವ ಮಹತ್ವದ ಪ್ರಕ್ರಿಯೆ. ದಶಕಗಳ ನಂತರ ಇದೀಗ ನಡೆಯುತ್ತಿರುವ ಜನಗಣತಿಯ ಸಂದರ್ಭದಲ್ಲಿ, ಜಾತಿಗಣತಿಯನ್ನು ನಡೆಸುವ ಕುರಿತಾದ ಚರ್ಚೆಗಳು ಮುನ್ನೆಲೆಗೆ ಬಂದಿವೆ.

ಜನಗಣತಿಯು ಕೇವಲ ಸಂಖ್ಯೆಗಳ ಸಂಗ್ರಹಣೆಯಲ್ಲ. ಇದು ದೇಶದ ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ಚಿತ್ರಣವನ್ನು ಕಟ್ಟಿಕೊಡುವ ಒಂದು ಪ್ರಮುಖ ಸಾಧನ. ಸರ್ಕಾರದ ನೀತಿ ನಿರೂಪಣೆ, ಅಭಿವೃದ್ಧಿ ಯೋಜನೆಗಳ ರಚನೆ ಮತ್ತು ಸಂಪನ್ಮೂಲಗಳ ನ್ಯಾಯೋಚಿತ ಹಂಚಿಕೆಗೆ ಜನಗಣತಿಯ ದತ್ತಾಂಶವು ಅತ್ಯಗತ್ಯ. ಶಿಕ್ಷಣ, ಆರೋಗ್ಯ, ಉದ್ಯೋಗ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿನ ಪ್ರಗತಿಯನ್ನು ಅಳೆಯಲು ಮತ್ತು ಹಿಂದುಳಿದ ಪ್ರದೇಶಗಳು ಹಾಗೂ ಸಮುದಾಯಗಳನ್ನು ಗುರುತಿಸಲು ಜನಗಣತಿ ಮಾಹಿತಿ ಸಹಕಾರಿಯಾಗುತ್ತದೆ.

ಶತಮಾನಗಳಿಂದಲೂ ಜಾತಿ ಆಧಾರಿತ ತಾರತಮ್ಯ ಮತ್ತು ಅಸಮಾನತೆಗಳು ಸಮಾಜದಲ್ಲಿ ಬೇರೂರಿವೆ. ಜಾತಿಗಣತಿಯು ಈ ಅಸಮಾನತೆಗಳ ನಿಖರವಾದ ಚಿತ್ರಣವನ್ನು ಒದಗಿಸುತ್ತದೆ ಎಂದು ಬೆಂಬಲಿಗರು ವಾದಿಸುತ್ತಾರೆ.

ಯಾವ ಜಾತಿಗಳು ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದಿವೆ ಎಂಬುದನ್ನು ಗುರುತಿಸಲು ಮತ್ತು ಅವರಿಗೆ ನಿರ್ದಿಷ್ಟವಾದ ಕಲ್ಯಾಣ ಯೋಜನೆಗಳನ್ನು ರೂಪಿಸಲು ಇದು ಸಹಾಯ ಮಾಡುತ್ತದೆ.

2011ರಲ್ಲಿ ನಡೆಸಲಾದ ಸಾಮಾಜಿಕ-ಆರ್ಥಿಕ ಮತ್ತು ಜಾತಿ ಗಣತಿಯ (SECC) ದತ್ತಾಂಶದ ಅನುಭವವು ಜಾತಿಗಣತಿಯ ಕುರಿತು ಭಿನ್ನಾಭಿಪ್ರಾಯಗಳನ್ನು ಹುಟ್ಟುಹಾಕಿದೆ. ಆ ಗಣತಿಯ ಜಾತಿ ಸಂಬಂಧಿತ ದತ್ತಾಂಶವು ಇನ್ನೂ ಸಾರ್ವಜನಿಕವಾಗಿ ಲಭ್ಯವಿಲ್ಲ, ಮತ್ತು ಅದರ ನಿಖರತೆ ಹಾಗೂ ಉಪಯುಕ್ತತೆಯ ಬಗ್ಗೆ ಪ್ರಶ್ನೆಗಳಿವೆ.

ಪ್ರಸ್ತುತ ನಡೆಯುತ್ತಿರುವ ಜನಗಣತಿಯು ವಿಳಂಬವಾಗಿದ್ದರೂ, ದೇಶದ ಭವಿಷ್ಯದ ದೃಷ್ಟಿಯಿಂದ ಇದು ಅತ್ಯಂತ ಮಹತ್ವದ್ದು. ಈ ಜನಗಣತಿಯೊಂದಿಗೆ ಜಾತಿಗಣತಿಯನ್ನು ಸೇರಿಸುವ ಕುರಿತು ದೇಶಾದ್ಯಂತ ವ್ಯಾಪಕ ಚರ್ಚೆಗಳು ನಡೆಯುತ್ತಿವೆ.


ಕೆಲವು ರಾಜ್ಯ ಸರ್ಕಾರಗಳು ತಮ್ಮದೇ ಆದ ಜಾತಿಗಣತಿಯನ್ನು ನಡೆಸಲು ಮುಂದಾಗಿರುವುದು ಈ ವಿಷಯದ ಸೂಕ್ಷ್ಮತೆಯನ್ನು ಎತ್ತಿ ತೋರಿಸುತ್ತದೆ.

ಒಟ್ಟಾರೆಯಾಗಿ, ಜನಗಣತಿಯು ದೇಶದ ಅಭಿವೃದ್ಧಿಗೆ ಅಡಿಪಾಯವಿದ್ದಂತೆ. ಅದರೊಂದಿಗೆ ಜಾತಿಗಣತಿಯನ್ನು ಸೇರಿಸುವುದರಿಂದಾಗುವ ಸಾಧಕ-ಬಾಧಕಗಳನ್ನು ಕೂಲಂಕಷವಾಗಿ ಪರಿಶೀಲಿಸಬೇಕಿದೆ.

### ಅವರಿವರನ್ನು ನಂಬಿ ಹಣ ಕಳೆದುಕೊಳ್ಳಬೇಡಿ

# ವೈಜ್ಞಾನಿಕ ವಾಸ್ತು ಇರಲಿ

ಇತ್ತೀಚಿನ ದಿನಗಳಲ್ಲಿ ವಾಸ್ತು ಎಂದು ನಂಬಿ ಅನೇಕ ಜ್ಯೋತಿಷಿಗಳ ಬಳಿ ಹೋಗಿ ದುಡ್ಡನ್ನು, ನೆಮ್ಮದಿಯನ್ನು ಕಳೆದುಕೊಳ್ಳುವ ಅಮಾಯಕರ ಸಂಖ್ಯೆ ಜಾಸ್ತಿಯಾಗುತ್ತಿದೆ. ಹಲವರು ಹಣವನ್ನೂ ಕಳೆದುಕೊಂಡು ಪರಿಹಾರ ಪಡೆಯದೇ ಇನ್ನಷ್ಟು ತೊಂದರೆಗೆ ಒಳಪಟ್ಟು ಹಲುಬುತ್ತಿರುತ್ತಾರೆ. ಅಂತವರಿಗೆಂದೇ ಇಲ್ಲಿವೆ ಕೆಲವು ಸರಳ ಪರಿಹಾರಗಳು.




ವಾಸ್ತು ಎಂದರೆ ಮೂಢ ನಂಬಿಕೆ, ಕೆಲ ತಜ್ಞರ ಧನ ಸಂಗ್ರಹಣಾ ಶಾಸ್ತ್ರ. ಮನೆ ಮುರಿದು, ಮನಸ್ಸು ಮುರಿದು ಕೊನೆಗೆ ಸಮಾಧಾನ ಸಿಗದೇ ಯಾಕಪ್ಪಾ ವಾಸ್ತುವಿಗೆ ಮೊರೆ ಹೋದೆವು ಎನ್ನುವ ಹಾಗೆ ಮಾಡುವವರು ಈಗ ಎಲ್ಲೆಡೆ ತುಂಬಿದ್ದಾರೆ. ಕೆಲವು ವಾಸ್ತು ತಜ್ಞರು ಮನೆಗೆ ಬರುತ್ತಾರೆ, ಪಾಸಿಟಿವ್-ನೆಗಟಿವ್ ಎನರ್ಜಿ ಪರೀಕ್ಷೆ ಮಾಡುತ್ತಾರೆ. ಕೆಲ ಗೋಡೆಗಳನ್ನೋ, ಮೂಲೆಗಳನ್ನೋ ಒಡೆಸುತ್ತಾರೆ ಹಾಗೂ ಕೆಲವು ಬದಲಾವಣೆಗಳನ್ನು ಸೂಚಿಸುತ್ತಾರೆ. ಮೊದಲೇ ಆರ್ಥಿಕ ತೊಂದರೆ ಎಂದು ಹೋದರೆ ಮತ್ತಿಷ್ಟು ಸಂಕಷ್ಟ ತಂದಿಟ್ಟು ಆ ವಾಸ್ತು ಈ ವಾಸ್ತು ಎಂದು ಸುಸ್ತು ಮಾಡಿಸುತ್ತಾರೆ ಎಂಬುದು ಹಲವರ ಅಂಬೋಣ.

ಎಲ್ಲಾ ಕಡೆಗೆ ಹೋದೆವು, ವಾಸ್ತು ಆಯಿತು, ಅದಾಯಿತು, ಇದಾಯಿತು, ಆ ಪೂಜೆ ಆಯಿತು, ಈ ಪೂಜೆ ಆಯಿತು... ಇನ್ನೂ ಏನೂ ಬದಲಾಗಿಲ್ಲ. ಬರೀ ಹಣ ಹೋಯಿತು, ಚಿಂತೆ ಹೆಚ್ಚಾಯಿತು ಹೀಗೆನಿಸಿದಾಗ ಹೆಚ್ಚು ಮರುಗದಿರಿ. ವೈಜ್ಞಾನಿಕ ವಾಸ್ತುವಿನ ಕೆಲವು ಸರಳ ವಿಧಾನಗಳ ನಿಮ್ಮ ಬದುಕನ್ನೇ ಬದಲಾಯಿಸುತ್ತವೆ.

ವೈಜ್ಞಾನಿಕ ವಾಸ್ತು ಒಳ್ಳೆಯ ಆಯ್ಕೆ. ಇದರಲ್ಲಿ ಮನೆ ಒಡೆಯುವ ಅವಶ್ಯಕತೆಯಿಲ್ಲ ಹಾಗೂ ಎಂತಹ ವಾಸ್ತು ದೋಷಗಳಿದ್ದರೂ ಅತಿ ಸರಳ ಪರಿಹಾರಗಳಿವೆ.

ದಕ್ಷಿಣಕ್ಕೆ ಅಂಗಡಿ, ಹೋಟೆಲ್, ಫ್ಯಾಕ್ಟರಿ ಬಾಗಿಲು ಇದೆಯೇ, ಒಂದು ತಾಮ್ರದ ಪಟ್ಟಿ ಅದರ ಜೊತೆಗೆ ಕೇಸರಿ ಬಣ್ಣ ಹಚ್ಚಿಬಿಡಿ, ದೋಷ ಪರಿಹಾರ ಆಯ್ತು. ಹೇಗೆ ಅಂತೀರಾ? ಅದು ಋಣಾತ್ಮಕ ಎಂದೇ ಹಲವರ ಭಾವನೆ. ಇರಲಿ ಋಣಾತ್ಮಕ ಎಂದೇ ಹೇಳೋಣ. ಶುದ್ಧ ತಾಮ್ರ ಋಣಾತ್ಮಕ ಶಕ್ತಿಯನ್ನು ಹೀರಿಕೊಳ್ಳುತ್ತದೆ. ಇದು ಮೆಟಲ್ ವಾಸ್ತು ಥೆರಪಿ. ಮತ್ತೆ ಕೇಸರಿ ಬಣ್ಣ ಕೆಟ್ಟ ಶಕ್ತಿಯನ್ನು ಹೊಡೆದು ಓಡಿಸುತ್ತದೆ. ಇದು ಕಲರ್ ಥೆರಪಿ.

ಇಲ್ಲಿ ಈ ಎರಡು ಥೆರಪಿಗಳ ಎಷ್ಟು ಚೆನ್ನಾಗಿ ಕೆಲಸ ಮಾಡುತ್ತವೆ ಎಂದರೆ, ನೀವು ಊಹಿಸಲೂ ಸಾಧ್ಯವಿಲ್ಲ. ನಾನು ನೂರಕ್ಕೂ ಹೆಚ್ಚು ಜನರಿಗೆ ಈ ಸರಳ ಟಿಪ್ಸ್ ಹೇಳಿದ್ದೇನೆ. ಇನ್ನು ದಕ್ಷಿಣ ಬಾಗಿಲ ಹೋಟೆಲ್ ಇದೆ, ಲಾಭ ಆಗುತ್ತಿಲ್ಲ ಅಂದರೆ ಪ್ರವೇಶ ದ್ವಾರದ ಅಭಿಮುಖವಾಗಿರುವ ಗೋಡೆಗೆ ಒಂದು ದೀಪ ಹಚ್ಚಿ ಇಟ್ಟುಬಿಡಿ, ಇದು ಫೈರ್ ಥೆರಪಿ.

ನಿಮ್ಮದು ಹೋಟೆಲ್ ಇದ್ದರೆ ಕ್ಯಾಶ್ ಕೌಂಟರ್ ಉತ್ತರಕ್ಕೆ ಇರಬೇಕು, ಮಾಲೀಕರು ಉತ್ತರಾಭಿಮುಖವಾಗಿ ಕೂರಬೇಕು. ಇರದಿದ್ದರೆ ಕೌಂಟರಿನಲ್ಲಿ ಕೇಸರಿ ಬಣ್ಣದ ಪಟ್ಟಿ ಇಟ್ಟು ಮುಂದೆ ಒಂದು ತಾಮ್ರದ ವಸ್ತು ಇಟ್ಟರೆ ದೋಷ ಪರಿಹಾರ. ಪ್ರವೇಶ ದ್ವಾರ ರಸ್ತೆಗೆ ಸಮನಾಗಿರಬೇಕು.

ಸಮನಾಗಿರದಿದ್ದರೆ ತಾಮ್ರದ ಒಂದು ಪಟ್ಟಿಯನ್ನು ಬಾಗಿಲಿಗೆ ಬಡಿಸಿ ಅಥವಾ ಒಂದು ತಾಮ್ರದ ಪಿರಾಮಿಡ್ ಪ್ರವೇಶ ದ್ವಾರದ ಕಡೆಗೆ ಇಟ್ಟರೆ ಸಾಕು.

ಮನೆಯಲ್ಲಿ ನೈರುತ್ಯದಲ್ಲಿ ಎತ್ತರವಿರಬೇಕು, ಇಲ್ಲೇನಾದರೂ ತಗ್ಗಿದ್ದರೆ ಧನ ಹಾಗೂ ಆರೋಗ್ಯದ ಸಮಸ್ಯೆ ಖಂಡಿತ. ಬಹಳ ಜನರಿಗೆ ಇದರ ಅರಿವಿಲ್ಲದೆ ದೊಡ್ಡ ದೊಡ್ಡ ಪಂಡಿತರ ಬಳಿಗೆ ಹೋಗಿ ಹಣ ಕಳೆದುಕೊಳ್ಳುತ್ತಾರೆ. ಇಲ್ಲಿ ಸ್ವಲ್ಪ ಮೆಟಾಲಿಕ್ ಕ್ರಿಸ್ಟಲ್ ಬಳಸಿ ಅಥವಾ ಕಲರ್ ಥೆರಪಿ ಬಳಸಬಹುದು. ಏನೂ ತಿಳಿಯದಿದ್ದರೆ ಮೊದಲು ಅಲ್ಲಿ ಉಪ್ಪು ಅಥವಾ ತುಳಸಿ ಗಿಡ ನೆಟ್ಟು ಬೆಳೆಸಿ.

ಇವಿಷ್ಟು ಮಾಡಿ ನೋಡಿ, ನೀವೇ ಊಹಿಸಲಾಗದಷ್ಟು ಪರಿಹಾರ ದೊರೆಯುತ್ತೆ.

ನಿಮ್ಮ ಅಕ್ಕಪಕ್ಕದವರಿಗೆ ಈ ಉಪಾಯಗಳನ್ನು ಹೇಳಿ. ಬೇರೆಯವರನ್ನು ನಂಬಿ ಹಣ ಕಳೆದುಕೊಳ್ಳದಿರಿ. ಒಳ್ಳೆಯ ವೈಜ್ಞಾನಿಕ ವಾಸ್ತು ಸಲಹೆ ಪಡೆದುಕೊಳ್ಳಿ. ನಿಮಗೇ ಗೊತ್ತಿದ್ದರೆ ಆ ಉಪಾಯವನ್ನು ಅನುಷ್ಠಾನಗೊಳಿಸಿ.

**– ಶಿಲ್ಪಾ ರಘೋತ್ತಮ ಕೊಪ್ಪರ.**
ವೈಜ್ಞಾನಿಕ ವಾಸ್ತು ಸಲಹೆಗಾರರು, ಗದಗ.

# ಜನಗಣತಿ ಜೊತೆಗೆ ಜಾತಿಗಣತಿ: ಕೇಂದ್ರ ಸರ್ಕಾರ ಮಹತ್ವದ ಘೋಷಣೆ

**■ ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಮುಂಬರುವ ರಾಷ್ಟ್ರೀಯ ಜನಗಣತಿಯಲ್ಲಿ ಜಾತಿ ದತ್ತಾಂಶವನ್ನು ಅಧಿಕೃತವಾಗಿ ಸೇರಿಸಲಾಗುವುದು ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಬುಧವಾರ ನಡೆದ ರಾಜಕೀಯ ವ್ಯವಹಾರಗಳ ಕೇಂದ್ರ ಸಮಿತಿ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದರು.

ರಾಜಕೀಯ ವ್ಯವಹಾರಗಳ ಸಂಪುಟ ಸಮಿತಿಯು ಮುಂಬರುವ ಜನಗಣತಿಯಲ್ಲಿ ಜಾತಿ ಎಣಿಕೆಯನ್ನು ಸೇರಿಸಬೇಕೆಂದು ಇಂದು ನಿರ್ಧರಿಸಿದೆ. ರಾಜಕೀಯ ಲಾಭಕ್ಕಾಗಿ ಜಾತಿ ಸಮೀಕ್ಷೆಗಳನ್ನು ವಿರೋಧ ಪಕ್ಷಗಳು ಬಳಸುತ್ತಿವೆ ಎಂದು ಆರೋಪಿಸಿದರು. ಜಾತಿ ಗಣತಿಯಂತಹ ಸಮೀಕ್ಷೆಗಳು ಸಮಾಜದಲ್ಲಿ ಅನುಮಾನಗಳನ್ನು ಸೃಷ್ಟಿಸಿವೆ. ನಮ್ಮ ಸಾಮಾಜಿಕ ರಚನೆಯು ರಾಜಕೀಯದಿಂದ ತೊಂದರೆಗೊಳಗಾಗದಂತೆ ನೋಡಿಕೊಳ್ಳಲು ಸಮೀಕ್ಷೆಗಳ ಬದಲಿಗೆ ಜಾತಿ ಎಣಿಕೆಯನ್ನು ಜನಗಣತಿಯಲ್ಲಿ ಸೇರಿಸಲಾಗುವುದು" ಎಂದು ಅವರು ಹೇಳಿದ್ದಾರೆ.

ಹಲವಾರು ರಾಜ್ಯಗಳಲ್ಲಿ ನಡೆಸಲಾದ ಜಾತಿ ಜನಗಣತಿ ಕಾರ್ಯವು ಅವೈಜ್ಞಾನಿಕವಾಗಿದೆ ಎಂದು ವೈಷ್ಣವ್ ದೂರಿದರು. ಈ ಸುದ್ದಿಗೋಷ್ಠಿಯಲ್ಲಿ ಪಹಲ್ಗಾಮ್, ಕಾಶ್ಮೀರ ಕುರಿತ ಯಾವುದೇ ಪ್ರಶ್ನೆಗಳಿಗೆ ಉತ್ತರಿಸದ ಅಶ್ವಿನಿ ವೈಷ್ಣವ್ ಕ್ಯಾಬಿನೆಟ್ ಸಭೆಯ ಬಗ್ಗೆ ಮಾತ್ರ ಕೇಳಿ ಎಂದು ಪತ್ರಕರ್ತರಿಗೆ ಹೇಳಿದರು.

# ಸ್ಕಾಲರ್ ಶಿಪ್ ವಂಚನೆ ಆರೋಪ: ಕಾಂಗ್ರೆಸ್ ಮುಖಂಡನ ಮನೆ ಮೇಲೆ ಇಡಿ ದಾಳಿ

**■ ವಿಜಯಸಾಕ್ಷಿ ಸುದ್ದಿ, ಕಲಬುರಗಿ**

ಎಂಆರ್ ಎಂ ಸಿ ಮೆಡಿಕಲ್ ಕಾಲೇಜಿನ 700 ಜನ ಎಂಬಿಬಿಎಸ್ ವಿದ್ಯಾರ್ಥಿಗಳ ಶಿಷ್ಯವೇತನ ಹಗರಣ ಮಾಡಿರುವ ಆರೋಪ ಕೇಳಿ ಬಂದಿರುವ ಹಿನ್ನೆಲೆಯಲ್ಲಿ ಕಲಬುರಗಿಯ ಕಾಂಗ್ರೆಸ್ ಮುಖಂಡ ಭೀಮಾಶಂಕರ್ ಬಿಲಗುಂದಿ ಮನೆ ಮೇಲೆ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ದಾಳಿ ಮಾಡಿದ್ದಾರೆ.

ನಾಲ್ವರು ಅಧಿಕಾರಿಗಳ ತಂಡ ಏಕಕಾಲಕ್ಕೆ ಕಲಬುರಗಿಯ ರಿಂಗ್ ರೋಡ್ ಬಳಿಯಿರುವ ಭೀಮಾಶಂಕರ್ ಬಿಲಗುಂದಿ ಅವರ ಮನೆ ಮೇಲೆ ದಾಳಿ ಮಾಡಿದ್ದು, ದಾಖಲೆ ಪರಿಶೀಲನೆ ನಡೆಸಿದರು. 2018 ರಿಂದ 2024 ರವರೆಗೆ ಹೈದರಾಬಾದ್ ಶಿಕ್ಷಣ ಸಂಸ್ಥೆಯ ಎರಡು ಅವಧಿಗೆ ಅಧ್ಯಕ್ಷರಾಗಿದ್ದ ಭೀಮಾಶಂಕರ್ ಬಿಲಗುಂದಿ ವಿರುದ್ಧ ಎಂಆರ್ ಎಂ ಸಿ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳ ಶಿಷ್ಯವೇತನ ಹಗರಣ ಆರೋಪ ಕೇಳಿಬಂದಿತ್ತು.

700 ಜನ ಎಂಬಿಬಿಎಸ್ ವಿದ್ಯಾರ್ಥಿಗಳ ಸುಮಾರು 80 ಕೋಟಿ ರೂ. ಅಧಿಕ ಹಣ ನೀಡದೆ ವಂಚನೆ ಮಾಡಿರುವ ಆರೋಪ ಇವರ ಮೇಲೆ ಕೇಳಿಬಂದಿತ್ತು.

### ಶ್ರೀ ಗುರು ಕೊಟ್ಟೂರೇಶ್ವರ ದೇವಸ್ಥಾನದ ಲೋಕಾರ್ಪಣೆ-ಪುರಾಣ ಪ್ರವಚನ ಕಾರ್ಯಕ್ರಮ

# ಪರಿಪೂರ್ಣ ಬದುಕಿಗೆ ಪ್ರವಚನಗಳು ಅಗತ್ಯ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದೇವರು, ಧರ್ಮ, ಸಂಸ್ಕೃತಿ, ಸಂಪ್ರದಾಯ, ಆಚಾರ-ವಿಚಾರಗಳನ್ನು ಮುನ್ನಡೆಸಿಕೊಂಡು ಹೋಗುವ ನಿಟ್ಟಿನಲ್ಲಿ ಪುರಾಣ-ಪ್ರವಚನದಂತಹ ಕಾರ್ಯಕ್ರಮಗಳು ನಡೆಯಬೇಕು ಎಂದು ಹೂವಿನಶಿಗ್ಲಿ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಅವರು ಸೋಮವಾರ ಸಂಜೆ ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡ ಶ್ರೀ ಗುರು ಕೊಟ್ಟೂರೇಶ್ವರ ದೇವಸ್ಥಾನದ ಲೋಕಾರ್ಪಣೆ ನಿಮಿತ್ತ ಹಮ್ಮಿಕೊಳ್ಳಲಾಗಿರುವ ಪುರಾಣ ಪ್ರಚವಚನ ಕಾರ್ಯಕ್ರಮ ಉದ್ಘಾಟಿಸಿ ಆಶೀರ್ವಚನ ನೀಡುತ್ತಿದ್ದರು.




ಪುರಾಣ ಪ್ರಾರಂಭೋತ್ಸವದ ಹಿನ್ನೆಲೆಯಲ್ಲಿ ಗ್ರಾಮದಲ್ಲಿ ಮಂಗಳ ವಾದ್ಯಗಳೊಂದಿಗೆ ಉಭಯ ಶ್ರೀಗಳ ಪಾಲ್ಗೊಳ್ಳುವಿಕೆಯೊಂದಿಗೆ ಪಾದಯಾತ್ರೆ ಮೂಲಕ ಜನಜಾಗೃತಿ ಮಾಡಲಾಯಿತು. ಕಾರ್ಯಕ್ರಮದಲ್ಲಿ ಆಮಂತ್ರಣ ಪತ್ರಿಕೆ ಬಿಡುಗಡೆ ಮಾಡಲಾಯಿತು.

ಪುರಾಣ ಪ್ರವಚನಗಳನ್ನು ಶ್ರವಣ ಮಾಡುವ ಮೂಲಕ ಮನಸ್ಸಿನ ದುಃಖ-ದುಮ್ಮಾನಗಳು ಕಳೆದು ಮನಃಶಾಂತಿ, ನಿರ್ಮಲಶುದ್ಧ- ಪ್ರಸನ್ನಚಿತ್ತ ಮನಸ್ಸನ್ನು ನಮ್ಮದಾಗಿಸಿಕೊಳ್ಳಲು ಸಾಧ್ಯ. ಪರಿಪೂರ್ಣ ಬದುಕಿಗೆ ಪ್ರವಚನಗಳು ಅಗತ್ಯವಾಗಿವೆ. ತಾಯಂದಿರುವ ಮಕ್ಕಳಿಗೆ ಉತ್ತಮ ಶಿಕ್ಷಣ ಸಂಸ್ಕಾರ ನೀಡುವ ಕಾರ್ಯವನ್ನು ಮಾಡಿ ಉತ್ತಮ ಪ್ರಜೆಗಳನ್ನು ರೂಪಿಸಬೇಕು. ಅಲ್ಲದೇ ನಮ್ಮ ಮುಂದಿನ ಪೀಳಿಗೆಯವರಿಗೆ ನಮ್ಮ ಸಂಪ್ರದಾಯ, ಸಂಸ್ಕೃತಿಗಳನ್ನು ಉಳಿಸಿ ಬೆಳೆಸಿಕೊಂಡು ಹೋಗುವ ನಿಟ್ಟಿನಲ್ಲಿ ಇಂತಹ ಧಾರ್ಮಿಕ-ಪ್ರವಚನ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವಂತೆ ಮಾಡುವದು ಅವಶ್ಯವಾಗಿದೆ. ಒಳ್ಳೆಯದನ್ನು ಕೇಳಿ ಅದನ್ನು ಮನನ ಮಾಡಿಕೊಂಡು ಜೀವನ ನಡೆಸುವದು ಅವಶ್ಯ. ಸಂತರ, ಶರಣರ, ಮಹಾತ್ಮರ ಚಿಂತನ-ಮಂಥನಗಳ ಸತ್ಸಂಗ ಕಾರ್ಯಕ್ರಮಗಳು ಜನರ ಮನಸ್ಸನ್ನು ಕಟ್ಟಿ ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಸಹಾಯಕಾರಿಯಾಗಿವೆ ಎಂದರು.

ನೀಲಗುಂದದ ಶ್ರೀ ಚನ್ನಬಸವ ಸ್ವಾಮೀಜಿ ಮಾತನಾಡಿ, ಜಗತ್ತಿನಲ್ಲಿ ನಡೆಯುವ ಎಲ್ಲ ಕಾರ್ಯಗಳಿಗೂ ಭಗಂತನ ಪ್ರೇರಣೆಯೇ ಮುಖ್ಯವಾಗಿರುತ್ತದೆ. ಆಧುನಿಕ ಜಗತ್ತಿನಲ್ಲಿ ಮೊಬೈಲ್, ಟಿವಿ, ಇತರೇ ಸಮೂಹ-ಸಂಪರ್ಕ ಮಾಧ್ಯಮಗಳಿಂದ ಧಾರ್ಮಿಕ ನಂಬಿಕೆ, ಆಚರಣೆಗಳು ಮತ್ತು ಸಂಸ್ಕೃತಿಗಳನ್ನು ಮರೆಯುತ್ತಿರುವದು ದುರ್ದೈವದ ಸಂಗತಿಯಾಗಿದೆ. ಮಾನವ ಜೀವನದ ನಂತರವೂ ಸಮಾಜ ಸ್ಮರಿಸುವ ಶ್ರೇಷ್ಠ ಬದುಕು ರೂಪಗೊಳ್ಳಲು ಸಜ್ಜನರ ಸಹವಾಸ, ಶ್ರೇಷ್ಠರ ಆಚಾರ-ವಿಚಾರಗಳು, ಧರ್ಮದ ಸಂಸ್ಕಾರ ಮನುಷ್ಯನಿಗೆ ಅಗತ್ಯ. ಅಂತಹ ವಾತಾವರಣ ಕಲ್ಪಿಸುವುದು ಇಂದಿನ ಅಗತ್ಯಗಳಲ್ಲೊಂದಾಗಿದೆ ಎಂದರು. ಈ ವೇಳೆ ಗ್ರಾಮದ ಹಿರಿಯರಾದ ಮಾದೇವಪ್ಪ ಬೆಳವಿಗಿ, ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ತಹಸೀಲ್ದಾರ ವಿರೇಶ ಮುಳಗುಂದಮಠ, ಡಿ.ವಾಯ್. ಹುನಗುಂದ, ಶಿವಯೋಗಿ ಹಿರೇಮಠ, ನಾಗಪ್ಪ ತಂಬ್ರಳ್ಳಿ, ನಾಗರಾಜ ಬೆಳವಿಗಿ, ರಾಜು ಓಲೇಕಾರ, ಮಂಜುನಾಥ ಗುಡಮಿ, ಸೋಮಯ್ಯ ವಿರಕ್ತಮಠ ಸೇರಿದಂತೆ ದೇವಸ್ಥಾನ ಕಮಿಟಿಯವರು, ಹಿರಿಯರು ಇದ್ದರು.

# ಪ್ರಾಮಾಣಿಕ ದುಡಿಮೆಯಿಂದ ಯಶಸ್ಸು




**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನೌಕರಿ ಖಾಸಗಿಯಾಗಿರಲಿ, ಸರಕಾರದ್ದೇ ಆಗಿರಲಿ. ದುಡಿಯುವವರು ಶ್ರದ್ಧೆ, ಪ್ರಾಮಾಣಿಕತೆಯಿಂದ ದುಡಿದರೆ ಅವರಿಗೆ ಸಮಾಜದಲ್ಲಿ ಉತ್ತಮ ಹೆಸರು ಕಟ್ಟಿಟ್ಟ ಬುತ್ತಿ. ಅಂತಹ ಹೆಸರನ್ನು ಇಂದು ನಿವೃತ್ತರಾಗುತ್ತಿರುವ ಎಸ್.ಎಚ್. ಭಜಂತ್ರಿಯವರು ತಾವು ಕೆಲಸ ಮಾಡಿದ ಕಡೆಯಲ್ಲೆಲ್ಲ ಸಂಪಾದಿಸಿದ್ದಾರೆ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ವೀರಪ್ಪಜ್ಜನವರ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಜರುಗಿದ ಕೆಪಿಟಿಸಿಲ್ ಕಿರಿಯ ಅಭಿಯಂತರ ಎಸ್.ಎಚ್. ಭಜಂತ್ರಿಯವರ ಸೇವಾ ನಿವೃತ್ತಿ ಸಮಾರಂಭದಲ್ಲಿ ಅವರು ಮಾತನಾಡಿದರು.

ಭಜಂತ್ರಿಯವರು ತಮ್ಮ ಸೇವೆಯ ಮೂಲಕ ಜನಾನುರಾಗಿಯಾದವರು. ತಮ್ಮ ಸೇವಾವಧಿಯಲ್ಲಿ ಯಾರೊಂದಿಗೂ ವೈರತ್ವ ಕಟ್ಟಿಕೊಳ್ಳದೆ, ಬಂದವರು ಚಿಕ್ಕವರು-ದೊಡ್ಡವರು ಎನ್ನುವ ಬೇಧವಿಲ್ಲದೆ ಎಲ್ಲರನ್ನೂ ಸಮನಾಗಿ ಕಂಡು ತಮ್ಮ ಸೇವೆ ಪೂರೈಸಿದರು. ಗಡಿಯಾರಕ್ಕೆ ಅಂಟಿಕೊಂಡು ಕೆಲಸ ಮಾಡದೆ ಕರ್ತವ್ಯದ ಕರೆ ಬಂದಾಗ ತಪ್ಪದೆ ಹಾಜರಾಗಿ ಅದನ್ನು ನಿರ್ವಹಿಸಿದ ರೀತಿ ನರೇಗಲ್ಲ ಮತ್ತು ಸುತ್ತಲಿನ ಜನರ ಮನಸ್ಸನ್ನು ಗೆದ್ದಿದೆ.

ಅವರ 39 ವರ್ಷಗಳ ಸೇವಾವಧಿಯಲ್ಲಿ ಸಾಥ್ ನೀಡಿದ ಅವರ ಶ್ರೀಮತಿಯವರೂ ಸಹ ಅಭಿನಂದನಾರ್ಹರು ಎಂದರು.

ಸಭೆಯನ್ನುದ್ದೇಶಿಸಿ ಮಹೇಶ ಕ್ಯಾದಗುಂಪಿ, ಯೋಗೀಶ ನಟಗಾರ, ಪ್ರಕಾಶ ಬಾರಕೇರ, ಎಸ್.ಎಸ್. ಭಜಂತ್ರಿ, ಹೇಮಂತ ಕುಲಕರ್ಣಿ, ನಿವೃತ್ತ ಇಂಜಿನಿಯರ್ ಬಾಗಲಕೋಟೆ, ರೋಣ ಎಇಇ ವೀರೇಶ ರಾಜೂರ ಮುಂತಾದವರು ಮಾತನಾಡಿದರು. ಎಇಇ ಗದಗ ಗೀತಾ ಬಂಕದಮನಿ ಅಧ್ಯಕ್ಷತೆ ವಹಿಸಿದ್ದರು.

ಸೇವಾವಧಿಯಲ್ಲಿ ತಮಗೆ ಸಕಲ ಸಹಕಾರ ನೀಡಿದ ಸರ್ವರನ್ನೂ ಭಜಂತ್ರಿ ಕೃತಜ್ಞತೆಯಿಂದ ಸ್ಮರಿಸಿದರು. ಸಮಾರಂಭದಲ್ಲಿ ಭಜಂತ್ರಿ ದಂಪತಿಗಳನ್ನು ಸನ್ಮಾನಿಸಲಾಯಿತು. ಎಂ.ಆರ್. ಭಗವತಿ ಪ್ರಾರ್ಥಿಸಿದರು. ಆನಂದ ಮಠದ ನಿರೂಪಿಸಿದರು. ನೌಕರರ ಸಂಘದ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

# ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹುಲಕೋಟಿ ಪದವಿಗೆ ಪ್ರವೇಶ ಆರಂಭ

**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ 2025-26ನೇ ಶೈಕ್ಷಣಿಕ ಸಾಲಿನಲ್ಲಿ ಬಿ.ಎ, ಬಿ.ಕಾಂ, ಬಿ.ಎಸ್ಸಿ ಪದವಿಗಳ ಪ್ರಥಮ ವರ್ಷಕ್ಕೆ ಪ್ರವೇಶ ಆರಂಭವಾಗಿದೆ.

ಸುಸಜ್ಜಿತ ಕಟ್ಟಡ, ಆಧುನಿಕ ತಂತ್ರಜ್ಞಾನ ಅಳವಡಿಕೆಯ ವರ್ಗ ಕೊಠಡಿಗಳು, ವಿಶಾಲವಾದ ಗ್ರಂಥಾಲಯ ಮತ್ತು ಪ್ರಾಯೋಗಿಕ ಕೊಠಡಿಗಳು, ನೈಸರ್ಗಿಕ ಅಧ್ಯಯನ ಸಭಾಂಗಣ, ಆಕರ್ಷಕ ಉದ್ಯಾನವನ, ನುರಿತ ಮತ್ತು ಅನುಭವಿ ಪ್ರಾಧ್ಯಾಪಕರನ್ನು ಹೊಂದಿರುವ ಈ ಕಾಲೇಜು ನ್ಯಾಕ್ ಕಮಿಟಿಯಿಂದ ಬಿ+ ಶ್ರೇಣಿಯ ಮಾನ್ಯತೆ ಹೊಂದಿದೆ.

ಕಲಾ ವಿಭಾಗದಲ್ಲಿ ಇತಿಹಾಸ, ಐಚ್ಛಿಕ ಕನ್ನಡ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಭೂಗೋಲಶಾಸ್ತ್ರ, ಐಚ್ಛಿಕ ಇಂಗ್ಲೀಷ್, ಸಮಾಜಶಾಸ್ತ್ರ, ವಿಜ್ಞಾನ ವಿಭಾಗದಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತಶಾಸ್ತ್ರ, ಗಣಕಶಾಸ್ತ್ರ ಮತ್ತು ವಾಣಿಜ್ಯ ವಿಭಾಗದಲ್ಲಿ ವಿಶ್ವವಿದ್ಯಾಲಯ ನಿಗದಿಪಡಿಸಿರುವ ವಿಷಯಗಳ ಅಧ್ಯಯನಕ್ಕೆ ಅವಕಾಶವಿದೆ. ವಿದ್ಯಾರ್ಥಿಗಳ ಭೌತಿಕ ಮತ್ತು ಬೌದ್ಧಿಕ ಬೆಳವಣಿಗೆಗೆ ಅವಶ್ಯವಿರುವ ಎಲ್ಲ ಶೈಕ್ಷಣಿಕ ಹಾಗೂ ಪಠ್ಯೇತರ ಸೌಲಭ್ಯಗಳನ್ನೂ ಕಲ್ಪಿಸಲಾಗುತ್ತಿದೆ.

ವಿದ್ಯಾರ್ಥಿ ವೇತನ, ಶುದ್ಧ ನೀರಿನ ಘಟಕ, ವಿಶಾಲವಾದ ಮೈದಾನ, ಎನ್.ಎಸ್.ಎಸ್., ಸಾರಿಗೆ ಸಂಪರ್ಕ ಮುಂತಾದವುಗಳು ಲಭ್ಯವಿವೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಹುಲಕೋಟಿ, ಗದಗ ನಗರದಲ್ಲಿ ಸರ್ಕಾರಿ ವಸತಿ ನಿಲಯಗಳ ವ್ಯವಸ್ಥೆಯಿದೆ. ಗದಗ-ಬೆಟಗೇರಿ ನಗರ ಮತ್ತು ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಕಾಲೇಜಿಗೆ ಪ್ರವೇಶ ಪಡೆದು ಈ ಸೌಲಭ್ಯಗಳ ಸದುಪಯೋಗದಿಂದ ಉಜ್ವಲ ಭವಿಷ್ಯ ನಿರ್ಮಿಸಿಕೊಳ್ಳಬೇಕೆಂದು ಕಾಲೇಜಿನ ಪ್ರಾಂಶುಪಾಲರಾದ ಡಾ. ಸುಧಾ ಕೌಜಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮೀಣ ಜೀವನವನ್ನು ಹತ್ತಿರದಿಂದ ಅರಿಯಿರಿ

**■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಗ್ರಾಮೀಣ ಪ್ರದೇಶದ ಸಂಸ್ಕೃತಿ, ಸಂಪ್ರದಾಯದ ಬಗ್ಗೆ ತಿಳಿದುಕೊಂಡು ಅವುಗಳ ಅಳವಡಿಕೆಗೆ ವಿದ್ಯಾರ್ಥಿಗಳು ನೇರವಾಗಿ ಗ್ರಾಮಸ್ಥರೊಂದಿಗೆ ಸಂಪರ್ಕ ಸಾಧಿಸಿ, ಸಾಮಾಜಿಕ ನಕ್ಷೆ, ಮೂಲಸೌಕರ್ಯ ನಕ್ಷೆ, ಆರೋಗ್ಯ ಶಿಬಿರಗಳು, ಸಸಿ ನಾಟಿ ಮತ್ತು ಸ್ವಚ್ಛತಾ ಜಾಗೃತಿ ಚಟುವಟಿಕೆಗಳಲ್ಲಿ ಪ್ರಾಯೋಗಿಕವಾಗಿ ತೊಡಗಿಕೊಂಡಾಗ ಅಧಿಕ ಅನುಭವ ಸಿಗುತ್ತದೆ ಎಂದು ಕುಲಪತಿ ಪ್ರೊ. ಸುರೇಶ ವಿ.ನಾಡಗೌಡ ಹೇಳಿದರು.



ಇಲ್ಲಿಯ ವಿರೂಪಾಕ್ಷೇಶ್ವರ ಪ್ರಾಂಗಣದಲ್ಲಿ ಗದಗ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಹಾಗೂ ಗ್ರಾಮ ಪಂಚಾಯಿತಿಯ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಸ್ನಾತಕೋತರ ವಿದ್ಯಾರ್ಥಿಗಳ ಗ್ರಾಮ ವಾಸ್ತವ್ಯ ಹಾಗೂ ಅಧ್ಯಯನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಿದ್ದರು.

ವಿದ್ಯಾರ್ಥಿಗಳು ಈ ಅವಕಾಶವನ್ನು ಸಮರ್ಪಕವಾಗಿ ಉಪಯೋಗಿಸಿಕೊಂಡು ಗ್ರಾಮೀಣ ಜೀವನವನ್ನು ಹತ್ತಿರದಿಂದ ಅರಿತುಕೊಳ್ಳಬೇಕು. ವಿದ್ಯಾರ್ಥಿಗಳಿಗೆ ಗ್ರಾಮೀಣ ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ಪರಸ್ಥಿತಿಗಳ ಸಮಗ್ರ ಅನುಭವ ನೀಡುವ ಉದ್ದೇಶವಿದೆ.

ಈ ಕಾರ್ಯಕ್ರಮವು ಶೈಕ್ಷಣಿಕ ಜ್ಞಾನವನ್ನು ನೈಜ ಅನುಭವದೊಂದಿಗೆ ಸಂಯೋಜಿಸುವ ವಿಶ್ವವಿದ್ಯಾಲಯದ ಬದ್ಧತೆಯನ್ನು ಸ್ಪಷ್ಟಪಡಿಸುತ್ತದೆ ಎಂದ ಅವರು, ಗ್ರಾಮೀಣಾಭಿವೃದ್ಧಿಯಲ್ಲಿ ಯುವ ಜನರ ಪಾತ್ರದ ಮಹತ್ವವನ್ನು ವಿವರಿಸಿದರು.

ಪಂಚಾಯತ್ ಅಭಿವೃದ್ಧಿ ಅಧಿಕಾರಿ ಅಮೀರನಾಯಕ ಮಾತನಾಡಿ, ಗ್ರಾಮೀಣ ಅಭಿವೃದ್ಧಿ ವಿಶ್ವ ವಿದ್ಯಾಲಯವು ಗ್ರಾಮೀಣ ಜನ ಜೀವನ, ಸಂಪ್ರದಾಯ, ಸಂಸ್ಕೃತಿಗಳನ್ನು ಅಧ್ಯಯನ ಮಾಡಿಸಿ ಅಳವಡಿಸಿಕೊಳ್ಳುವ ಒಂದು ಶ್ರೇಷ್ಠ ವಿದ್ಯಾಲಯವಾಗಿದೆ. ಆದ್ದರಿಂದ ಲಕ್ಕುಂಡಿ ಗ್ರಾಮದಲ್ಲಿಯ ಹಲವಾರು ಪರಂಪರೆಯ ಸ್ಮಾರಕಗಳು, ಗುಡಿ ಕೈಗಾರಿಕೆಗಳು, ದಿನ ನಿತ್ಯ ಜೀವನ ಶೈಲಿ ಸೇರಿದಂತೆ ನಿಮ್ಮ ಭಾವೀ ಜೀವನಕ್ಕೆ ಬೇಕಾಗುವ ಹಲವಾರು ವಿಷಯಗಳು ಸಿಗುತ್ತವೆ. ಅವುಗಳನ್ನು ಅಧ್ಯಯನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಗ್ರಾ.ಪಂ ಸದಸ್ಯ ವಿರೂಪಾಕ್ಷಪ್ಪ ಬೆಟಗೇರಿ, ಹನುಮಂತಪ್ಪ ಬಂಗಾರಿ, ಅಧ್ಯಯನದ ಮಾರ್ಗದರ್ಶಕ ಮಂಜುನಾಥ ಎಂ.ಎಂ., ಡಾ. ಸಂಗನಗೌಡ ಪಾಟೀಲ, ಡಾ. ಶಂಕರ ಮುಳಗುಂದ ವೇದಿಕೆಯಲ್ಲಿದ್ದರು. ಪದವಿ ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಪಿ.ಡಿ.ಓ ಸುರೇಶ ನಿರೂಪಿಸಿದರು.



ಲಕ್ಷ್ಮೇಶ್ವರದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಬುಧವಾರ ಲಕ್ಷ್ಮೇಶ್ವರ ತಾಲೂಕಾ ಶರಣ ಸಾಹಿತ್ಯ ಪರಿಷತ್ ಹಾಗೂ ಕದಳಿ ಮಹಿಳಾ ವೇದಿಕೆ ಆಶ್ರಯದಲ್ಲಿ ಸಾಂಸ್ಕೃತಿಕ ರಾಯಭಾರಿ ಜಗಜ್ಯೋತಿ ಬಸವೇಶ್ವರರ ಜಯಂತಿಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ತಾಲೂಕಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಎಲ್.ಎಸ್. ಅರಳಹಳ್ಳಿ, ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ನಿರ್ಮಲಾ ಜಿ.ಅರಳಿ, ನಾಗರಾಜ ಹಣಗಿ, ಚಂದ್ರಶೇಖರ ಹೂಗಾರ, ಅಪ್ಪಯ್ಯ ಬಾಳಿಹಳ್ಳಿಮಠ, ನಾಗರಾಜ ಚಿಂಚಲಿ, ನಿಂಗಪ್ಪ ಗೊರವರ, ಗಂಗಾಧರ ಅರಳಿ, ಶಿವಲಿಂಗಯ್ಯ ಹೊತ್ತಿಗೆಮಠ, ಶಿವಾನಂದ ಯರಲಗಟ್ಟಿ, ಚಂದ್ರಶೇಖರ ತಹಸೀಲ್ದಾರ ಇದ್ದರು.



ಲಕ್ಷ್ಮೇಶ್ವರ ಸಮೀಪದ ಹೂವಿನಶಿಗ್ಲಿ ಮಠದಲ್ಲಿ ಶ್ರೀ ಚನ್ನವೀರ ಮಹಾಸ್ವಾಮಿಗಳು ಮಹಾಮಾನವತಾವಾದಿ ಬಸವೇಶ್ವರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಬಸವ ಜಯಂತಿ ಆಚರಿಸಿದರು. ಗುರುಕುಲದ ಶಿಕ್ಷಕರು, ಮಕ್ಕಳು ಇದ್ದರು.

### ಭಟಪನಹಳ್ಳಿಯ ಭೀಮಾಂಬಿಕಾದೇವಿ ಜಾತ್ರೆ, ಉಚಿತ ಸಾಮೂಹಿಕ ವಿವಾಹ

# ಮಕ್ಕಳಿಗೆ ಸಂಸ್ಕಾರ, ಸಂಸ್ಕೃತಿ ಕಲಿಸಿ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನೂತನ ದಂಪತಿಗಳು ಆದರ್ಶ ದಂಪತಿಗಳಾಗಿ ಬಾಳಲಿ, ಕುಟುಂಬ ಯೋಜನೆ ಪಾಲಿಸಿ ಮಕ್ಕಳನ್ನು ಧರ್ಮದ ಹಾದಿಯಲ್ಲಿ ಮುನ್ನಡೆಸುವ ಮೂಲಕ ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಪಾಲಿಸಲು ಅವರಿಗೆ ಮಾರ್ಗದರ್ಶನ ನೀಡಲಿ ಎಂದು ಶಿರಹಟ್ಟಿಯ ಫಕೀರೇಶ್ವರ ಸಂಸ್ಥಾನಮಠದ ಪೂಜ್ಯ ಜ.ಫಕೀರಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಅವರು ಕುಕನೂರ ತಾಲೂಕಿನ ಭಟಪನಹಳ್ಳಿ ಗ್ರಾಮದ ಭೀಮಾಂಬಿಕಾದೇವಿಯ ಮಠದಲ್ಲಿ ಶ್ರೀ ಭೀಮಾಂಬಿಕಾದೇವಿಯ ಜಾತ್ರಾ ಮಹೋತ್ಸವ, ಭೀಮಾಂಬಿಕಾದೇವಿಯ ಪುರಾಣ ಮಹಾಮಂಗಲ, ಸಾಮೂಹಿಕ ವಿವಾಹ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ದಯಪಾಲಿಸಿದರು. ಮಕ್ಕಳಿಗೆ ಬಾಲ್ಯದಲ್ಲಿಯೇ ಉತ್ತಮ ಸಂಸ್ಕಾರ ನೀಡಬೇಕು. ಅವರಿಗೆ ಉನ್ನತ



ಶಿಕ್ಷಣ ನೀಡುವ ಮೂಲಕ ಅವರ ಬದುಕು ಆದರ್ಶಮಯವಾಗಿ ರೂಪುಗೊಳ್ಳುವಂತೆ ಮಾಡಲು ಪಾಲಕ-ಪೋಷಕರು ಮುಂದಾಗಬೇಕು. ಭಟಪನಹಳ್ಳಿ ಗ್ರಾಮಸ್ಥರು ಧರ್ಮವಂತರು, ಸಂಸ್ಕಾರವಂತರಾಗಿದ್ದು ಪ್ರತಿ ವರ್ಷ ಜಾತ್ರೆ, ಪುರಾಣ, ಸಾಮೂಹಿಕ ವಿವಾಹ ಏರ್ಪಡಿಸಿಕೊಂಡು ಬಂದಿರುವದು ಶ್ಲಾಘನೀಯ. ಮುಂದಿನ ಜಾತ್ರೆಯೊಳಗೆ ಭೀಮಾಂಬಿಕಾದೇವಿಯ ಮಠಕ್ಕೆ ಹೊಸ ತೇರು ಬರಬೇಕು. ಅದಕ್ಕಾಗಿ ವಾಗ್ದಾನ ಮಾಡಿದ ಭಕ್ತಾಧಿಗಳು 15 ಲಕ್ಷ ರೂ.ಗಳನ್ನು ನೀಡಿ ಈ ಕೈಂಕರ್ಯವನ್ನು ಸಾಕಾರಗೊಳಿಸಬೇಕೆಂದರು.

ತುರವಿಹಾಳದ ಪೂಜ್ಯ ಮಹಾದೇವಯ್ಯ ಗುರುವಿನ ಅವರು ಮಾತನಾಡಿ, ಧರ್ಮ, ಧಾರ್ಮಿಕತೆಗೆ ಹೆಸರಾಗಿರುವ ಭಟಪನಹಳ್ಳಿ ಗ್ರಾಮಸ್ಥರು ಭಕ್ತವಂತರು, ನೀತಿವಂತರಾಗಿದ್ದು, ಪ್ರತಿ ವರ್ಷ ಈ ರೀತಿಯ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬಂದಿರುವದು ಅನುಕರಣೀಯ ಎಂದರು.

ಕಾಟ್ರಳ್ಳಿಯ ಪಂ. ಶಾಂತವೀರಯ್ಯ ಶಾಸ್ತ್ರೀಗಳ ದೇವಿಯ ಪುರಾಣಕ್ಕೆ ಕಲಬುರ್ಗಿಯ ಶಶಿಧರ ಗವಾಯಿಗಳು ಕುರಹಟ್ಟಿಯ ಬಸವರಾಜ

ಕುಕನೂರಿನ ಅನ್ನದಾನೀಶ್ವರ ಶಾಖಾಮಠದ ಪೂಜ್ಯ ಡಾ. ಮಹಾದೇವ ಮಹಾಸ್ವಾಮಿಗಳು ಮಾತನಾಡಿ, ಬೆಲೆ ಏರಿಕೆಯ ಇಂದಿನ ದಿನಮಾನಗಳಲ್ಲಿ ಮಕ್ಕಳ ಮದುವೆ ಮಾಡಲು ಹೆತ್ತವರು ತೀವ್ರ ತೊಂದರೆ ಅನುಭವಿಸುವಂತಾಗಿದೆ. ಈ ಸೂಕ್ಷ್ಮತೆಯನ್ನು ಅರಿತು ಜಾತ್ರಾ ಸಮಿತಿಯ ಪದಾಧಿಕಾರಿಗಳು ಪ್ರತಿ ವರ್ಷ ಉಚಿತ ಸಾಮೂಹಿಕ ವಿವಾಹ ಏರ್ಪಡಿಸಿಕೊಂಡು ಬಂದಿರುವದು ಅಭಿನಂದನೀಯ ಎಂದರು.

ಹುಯಿಲಗೋಳ ಸಂಗೀತ ಸಾಥ್ ನೀಡಿದರು. ಕರ್ನಾಟಕ ಲೋಕಸೇವಾ ಆಯೋಗದ ನಿವೃತ್ತ ಸದಸ್ಯ ಡಾ. ಎಚ್.ಡಿ. ಪಾಟೀಲ, ಹೇಮಲತಾ ಹುಚ್ಚನಗೌಡ ಪಾಟೀಲ ಸೇರಿದಂತೆ ಗ್ರಾಮದ ಗುರು-ಹಿರಿಯರು ಪುರಾಣದದಲ್ಲಿ ಬರುವ ಭೀಮಾಂಬಿಕಾದೇವಿಯ ಮದುವೆ ಸನ್ನಿವೇಶವನ್ನು ನೆರವೇರಿಸಿದರು. ಜಾತ್ರಾ ಸಮಿತಿಯ ಎಲ್ಲ ಪದಾಧಿಕಾರಿಗಳು, ಗ್ರಾಮದ ಹಿರಿಯರು ಎಲ್ಲ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಿರುವದನ್ನು ಡಾ.ಹುಚ್ಚನಗೌಡ ಪಾಟೀಲರು ಶ್ಲಾಘಿಸಿದರು. ಉಚಿತ ಸಾಮೂಹಿಕ ವಿವಾಹದಲ್ಲಿ 13 ಜೋಡಿಗಳು ದಾಂಪತ್ಯ ಜೀವನಕ್ಕೆ ಪಾದಾರ್ಪಣೆ ಮಾಡಿದರು. ಕಾರ್ಯಕ್ರಮದ ಬಳಿಕ ಅನ್ನಸಂತರ್ಪಣೆ ಜರುಗಿತು. ಕಾರ್ಯಕ್ರಮದಲ್ಲಿ ಹುಚ್ಚೀರಯ್ಯ ಭದ್ರಾಪೂರ, ಹಂಚಾಳಪ್ಪ ಕಲಗುಡಿ, ಪರಸಪ್ಪ ಹೊಸಮನಿ, ಶರಣಪ್ಪ ಹಾದಿಮನಿ, ಮಲ್ಲಿಕಾರ್ಜುನ ಕರಮುಡಿ, ಮಲ್ಲಪ್ಪ ಗುಡಿಹಿಂದಲ, ರಾಮಚಂದ್ರ ಜೋಗಿನ, ಭೀಮಣ್ಣ ಉದ್ಧಾರ, ರಾಜಶೇಖರ ಕರಮುಡಿ, ಯಲ್ಲಪ್ಪ ಕಲಗುಡಿ, ದೇವಪ್ಪ ಬಾವಿಕಟ್ಟಿ, ಯಲ್ಲಪ್ಪ ಗುರಿಕಾರ, ವಿಜಯಕುಮಾರ ಕಾಗಿ, ಶ್ರೀಧರ ಹೊಸಮನಿ, ಚನ್ನಪ್ಪ ವಾಲಿಕಾರ, ಕಿರಣ ಗುದ್ಯಾಡಿ, ಹನಮಪ್ಪ ಗಾಳಿ, ಯಲ್ಲಪ್ಪ ದೇವರಳ್ಳಿ, ಬಸಪ್ಪ ಕುಡಗುಂಟಿ, ಯಲ್ಲಪ್ಪ ತೊಂಡಿಹಾಳ ಮುಂತಾದವರಿದ್ದರು.

# ಜಿಲ್ಲಾ ವಕೀಲರ ಸಂಘದಲ್ಲಿ ಬಸವೇಶ್ವರ ಜಯಂತಿ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಕೀಲರ ಸಂಘದ ಕಾರ್ಯಾಲಯದಲ್ಲಿ ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳು ಹಾಗೂ ಸಮಸ್ತ ವಕೀಲ ಭಾಂದವರು ಬಸವೇಶ್ವರ ಜಯಂತಿಯನ್ನು ಆಚರಿಸಿದರು.

ಈ ಸಂಧರ್ಭದಲ್ಲಿ ಮಾತನಾಡಿದ ವಕೀಲರ ಸಂಘದ ಅಧ್ಯಕ್ಷ ಆರ್.ಜಿ. ಕಲ್ಲೂರ ವಕೀಲರು, ವಿಶ್ವಗುರು ಬಸವಣ್ಣನವರನ್ನು ಒಬ್ಬ ಮಹಾನ್ ಕ್ರಾಂತಿಕಾರಿ ಎಂದು ಪರಿಗಣಿಸಲಾಗಿದೆ. ಅವರು ಬಿಜ್ಜಳ ರಾಜ್ಯದ ಮುಖ್ಯಮಂತ್ರಿಯಾಗಿ 12ನೇ ಶತಮಾನದಲ್ಲಿ ಭಾರತದಲ್ಲಿ 'ಅನುಭವ ಮಂಟಪ' ಎಂಬ ಆಧ್ಯಾತ್ಮಿಕ ಪ್ರಜಾಪ್ರಭುತ್ವವನ್ನು ಸ್ಥಾಪಿಸಿದರು. ಸಂತ ಅಲ್ಲಮಪ್ರಭು ನೇತೃತ್ವದಲ್ಲಿ ಇದನ್ನು ವಿಶ್ವದ ಮೊದಲ ಸಂಸತ್ ಪರಿಕಲ್ಪನೆ ಎಂದೂ ಕರೆಯಲಾಗುತ್ತದೆ. ಇದು ಮಾನವಕುಲದ ದುಃಖಗಳಿಗೆ ಎಲ್ಲಾ ರೀತಿಯ ಪ್ರಾಯೋಗಿಕ



ಪರಿಹಾರಗಳನ್ನು ಹೊಂದಿತ್ತು ಎಂದು ನುಡಿದರು.

ಉಪಾಧ್ಯಕ್ಷ ಎಮ್.ಎ. ಸಂಗನಾಳ ವಕೀಲರು ಮಾತನಾಡಿ, ಬಸವಣ್ಣನವರ ಚಿಂತನೆಗಳು, ಬೋಧನೆಗಳು ನಕಾರಾತ್ಮಕ ಆಲೋಚನೆಗಳನ್ನು ಹರಡಬಾರದು ಅಥವಾ ಭಾವನಾತ್ಮಕವಾಗಿ ಮತ್ತು ದೈಹಿಕವಾಗಿ ಇನ್ನೊಬ್ಬ ಮನುಷ್ಯನನ್ನು ನೋಯಿಸಬಾರದು ಎಂಬುದರ ಮೇಲೆ ಆಧಾರಿತವಾಗಿವೆ. ಬಸವಣ್ಣ ಸಾಮಾಜಿಕ ಪೂರ್ವಾಗ್ರಹ ಮತ್ತು ಸಾಮಾಜಿಕ ಸಮಸ್ಯೆಗಳ ಬಗ್ಗೆಯೂ ಜಾಗೃತಿ ಮೂಡಿಸಿದ್ದಾರೆ. ಬಸವಣ್ಣ ಇಷ್ಟಲಿಂಗ ಹಾರವನ್ನು ಸಹ ಪರಿಚಯಿಸಿದರು ಎಂದು ಹೇಳಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಎಮ್.ಎ. ನಾಯ್ಕರ, ಸಹ ಕಾರ್ಯದರ್ಶಿ ಸಿ.ಬಿ. ಗೂಳರೆಡ್ಡಿ, ಕೋಶಾಧ್ಯಕ್ಷರಾದ ಶೈಲಜಾ ಬಿ.ಹಿರೇಮಠ, ವಕೀಲರಾದ ಎಮ್.ಎಚ್. ಭಜಂತ್ರಿ, ಎಸ್.ಕೆ. ನದಾಫ್, ವೈ.ಡಿ. ತಳವಾರ್, ಎಸ್.ಎ. ಸಂಗನಾಳ, ಎಮ್.ಎನ್. ಗೋಡಿ, ವಕೀಲರ ಸಂಘದ ಗುಮಾಸ್ತ ಈರಣ್ಣ ಪಲ್ಲೇದ ಉಪಸ್ಥಿತರಿದ್ದರು.

# ಸಮಾಜ ಸುಧಾರಕ ಬಸವಣ್ಣ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಸವಣ್ಣನವರು 12ನೇ ಶತಮಾನದ ಕನ್ನಡದ ಒಬ್ಬ ತತ್ವಜ್ಞಾನಿ, ಸಮಾಜ ಸುಧಾರಕರಾಗಿದ್ದರು. ಶಿವ ಕೇಂದ್ರೀಕೃತ ಭಕ್ತಿ ಚಳುವಳಿಯಲ್ಲಿ ಕನ್ನಡ ಕವಿಯಾಗಿದ್ದರು ಎಂದು ಮುಖ್ಯ ಶಿಕ್ಷಕ ಬಸವರಾಜ ಕುಂಬಾರ ಹೇಳಿದರು.

ಇಲ್ಲಿನ ಸರ್ಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಜಗಜ್ಯೋತಿ ಬಸವಣ್ಣನವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಬಸವಣ್ಣನವರು ವಚನಗಳ



ಮೂಲಕ ಸಾಮಾಜಿಕ ಅರಿವು ಹರಡಿದರು. ಬಸವಣ್ಣ ಅವರು ಲಿಂಗ, ಸಾಮಾಜಿಕ ತಾರತಮ್ಯ, ಮೂಢನಂಬಿಕೆಗಳನ್ನು ನಿರಾಕರಿಸಿದರು. ಇಷ್ಟಲಿಂಗ ಹಾರವನ್ನು ಪರಿಚಯಿಸಿದರು ಎಂದರು. ಈ ಸಂದರ್ಭದಲ್ಲಿ ಸಿಆರ್‌ಪಿ ಸತೀಶ್ ಬೋಮಲೆ, ಮುಖ್ಯ ಶಿಕ್ಷಕರಾದ ಡಿ.ಎನ್. ದೊಡ್ಡಮನಿ, ಆರ್.ಕೆ. ಉಪನಾಳ ಇದ್ದರು.

### ದಲಿತ ಯುವ ಕಾವ್ಯ ಕಮ್ಮಟದ ಸಮಾರೋಪದಲ್ಲಿ ದೊಡ್ಡಣ್ಣ ಭಜಂತ್ರಿ

# ದಲಿತ ಕಾವ್ಯದಲ್ಲಿ ಜೀವಪರ ಚಿಂತನೆಯಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾವ್ಯ ಎಂದರೆ ಜೀವನಪ್ರೀತಿ, ಕಾವ್ಯ ಎಂದರೆ ಅಂತಃಕರಣ, ಕಾವ್ಯ ಎಂದರೆ ಮನುಷ್ಯತ್ವ. ಅದರ ಒಳಗಡೆ ಅಗಾಧವಾದ ಶಕ್ತಿ-ಸಾಮರ್ಥ್ಯವಿದೆ. ಸಮಾಜದ ದೌರ್ಜನ್ಯ, ಅನ್ಯಾಯದ ವಿರುದ್ಧ ಸಿಡಿದೇಳುವ ಶಕ್ತಿ ಕನ್ನಡ ದಲಿತ ಕಾವ್ಯಕ್ಕಿದೆ ಎಂದು ಕವಿ ದೊಡ್ಡಣ್ಣ ಭಜಂತ್ರಿ ನುಡಿದರು.

ಅವರು ಇತ್ತೀಚೆಗೆ ಹುಲಕೋಟಿಯ ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ ದಲಿತ ಸಾಹಿತ್ಯ ಪರಿಷತ್ತು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಹಕಾರ ರೇಡಿಯೋ ಇವರ ಸಂಯುಕ್ತಾಶ್ರಯದಲ್ಲಿ ಜರುಗಿದ ರಾಜ್ಯಮಟ್ಟದ ದಲಿತ ಯುವ ಕಾವ್ಯ ಕಮ್ಮಟದ ಸಮಾರೋಪ ಸಮಾರಂಭದಲ್ಲಿ ಮಾತನಾಡುತ್ತಿದ್ದರು.

ದಲಿತ ಕಾವ್ಯದಲ್ಲಿ ಜೀವಪರ ಕಾಳಜಿಯ ಚಿಂತನೆಯಿದೆ. ಡಾ. ಸಿದ್ಧಲಿಂಗಯ್ಯ, ಅರವಿಂದ



ಮಾಲಗತ್ತಿ, ಸುಬ್ಬು ಹೊಲೆಯಾರ, ಡಾ. ಸತ್ಯಾನಂದ ಪಾತ್ರೋಟ, ಮುಡ್ನಾಕೂಡು ಚಿನ್ನಸ್ವಾಮಿ ಮುಂತಾದ ಕವಿಗಳ ಕಾವ್ಯಗಳಲ್ಲಿ ಮನುಷ್ಯಕೇಂದ್ರಿತ ಚಿಂತನೆಗಳಿವೆ. ದಲಿತ ಯುವ ಕಾವ್ಯ ಕಮ್ಮಟ ಮುಂದಿನ ತಲೆಮಾರಿನ ಬರಹಗಾರರಿಗೆ ದಿಕ್ಸೂಚಿಯಾಗಲಿ ಎಂದರು.

2ನೇ ದಿನದ ಕಮ್ಮಟದಲ್ಲಿ 'ನಾನು ನನ್ನ ಕವಿತೆ; ಕವಿಗಳೊಂದಿಗೆ ಸಂವಾದ' ಗೋಷ್ಠಿಯಲ್ಲಿ ಮೈಸೂರಿನ ಮೌಲ್ಯಸ್ವಾಮಿ, ಶಿವಮೊಗ್ಗದ ಡಾ. ಎಸ್.ಕೆ. ಮಂಜುನಾಥ, ಗದುಗಿನ ಈರಣ್ಣ ಮಾದರ, ಚಿತ್ರದುರ್ಗದ ಬಿ.ಎಂ. ಗುರುನಾಥ, ವಿಜಯನಗರದ ಅಂಜಲಿ ಬೆಳಗಲ್, ಹಾಸನದ ಐಚನಹಳ್ಳಿ ಕೃಷ್ಣಪ್ಪ ಭಾಗವಹಿಸಿ ತಮ್ಮ ಕವಿತೆಗಳನ್ನು ವಾಚಿಸಿದರು.

ಎರಡು ದಿನಗಳ ಕಾವ್ಯಕಮ್ಮಟದಲ್ಲಿ 'ದಲಿತ ಕಾವ್ಯ ಮತ್ತು ಯುವಕರು' ಎಂಬ ವಿಷಯದ ಕುರಿತು ಶಿವಮೊಗ್ಗದ ಡಾ. ಸುಭಾಷ ಮರವಂತೆ, 'ದಲಿತ ಕಾವ್ಯದ ಆಶಯ ಅಭಿವ್ಯಕ್ತಿಯ ವಿನ್ಯಾಸಗಳು' ವಿಷಯವಾಗಿ ಹುಬ್ಬಳ್ಳಿಯ ಅನುಸೂಯಾ ವೈ.ಟಿ, ಕನ್ನಡ ದಲಿತ ಕಾವ್ಯ ಚಳವಳಿ ಕುರಿತು ಡಾ. ಅಪ್ಪಗೆರೆ ಸೋಮಶೇಖರ ಉಪನ್ಯಾಸ ನೀಡಿದರು.

ಕರ್ನಾಟಕದ ವಿವಿಧ ಜಿಲ್ಲೆಗಳ 50ಕ್ಕೂ ಹೆಚ್ಚು ಯುವ ಕವಿಗಳು ಕಮ್ಮಟದಲ್ಲಿ ಭಾಗವಹಿಸಿದ್ದರು. ಹುಲಕೋಟಿಯ ಮುಕ್ತಿವನದಲ್ಲಿ ಆಯ್ದ ದಲಿತ ಕಾವ್ಯ ಓದು ಚರ್ಚೆಯನ್ನು ಏರ್ಪಡಿಸಿದ್ದು ವಿಶೇಷವಾಗಿತ್ತು. ಕಮ್ಮಟದ ನಿರ್ದೇಶಕರಾಗಿ ಡಾ. ಸದಾಶಿವ ದೊಡ್ಡಮನಿ, ಸಹ ನಿರ್ದೇಶಕರಾಗಿ ಡಾ. ಲಕ್ಷ್ಮೀ ನಾರಾಯಣಸ್ವಾಮಿ, ಡಾ. ಸೋಮಕ್ಕ ಎಂ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ದಲಿತ ಕಲಾ ಮಂಡಳಿಯ ಕ್ರಾಂತಿಗೀತೆಗಳು, ಯುವಗಾಯಕ ಕೃಷ್ಣಾ ಕಡಿಯವರ ಭಾವಗೀತೆಗಳು ಮೂಡಿಬಂದವು. ದ.ಸಾ.ಪದ ಉಪಾಧ್ಯಕ್ಷ ಡಾ. ವೈ. ಎಂ. ಭಜಂತ್ರಿ, ಖಜಾಂಚಿ ಡಾ. ಎಚ್.ಬಿ. ಕೋಲ್ಕಾರ, ರಾಜ್ಯಾಧ್ಯಕ್ಷ ಡಾ. ಅರ್ಜುನ ಗೊಳಸಂಗಿ ಭಾಗವಹಿಸಿದ್ದರು.

# ಜಾತಿಗಣತಿಗೆ ಮುಂದಾದ ಕೇಂದ್ರ ಸರ್ಕಾರ: ಸಿಎಂ ಸಿದ್ದರಾಮಯ್ಯ ಸ್ವಾಗತ

■ ವಿಜಯಸಾಕ್ಷಿ ಸುದ್ದಿ, ಬಾಗಲಕೋಟೆ

ಜಾತಿಗಣತಿಗೆ ಮುಂದಾಗಿರುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಕರ್ನಾಟಕ ಸಿಎಂ ಸಿದ್ದರಾಮಯ್ಯ ಅವರು ಸ್ವಾಗತಿಸಿದ್ದಾರೆ.

ಮಾಧ್ಯಮ ಪ್ರಕಟಣೆ ಹೊರಡಿಸಿರುವ ಸಿದ್ದರಾಮಯ್ಯ, ಜನಗಣತಿ ಜೊತೆಯಲ್ಲಿ ಜಾತಿ ಗಣತಿಯನ್ನೂ ನಡೆಸುವ ಕೇಂದ್ರ ಸರ್ಕಾರದ ತೀರ್ಮಾನವನ್ನು ನಮ್ಮ ಸರ್ಕಾರ ಹೃತ್ಪೂರ್ವಕವಾಗಿ ಸ್ವಾಗತಿಸುತ್ತದೆ.

ಕರ್ನಾಟಕದಲ್ಲಿ ನಾವು ಕೇವಲ ಜಾತಿ ಗಣತಿ ನಡೆಸದೇ ಅದರ ಜೊತೆ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಸಮೀಕ್ಷೆಯನ್ನು ನಡೆಸಿದ್ದೇವೆ.

ಈ ದತ್ತಾಂಶಗಳ ಆಧಾರದಲ್ಲಿ ಈಗಿನ ಮೀಸಲಾತಿ ನೀತಿಯನ್ನು ಪರಿಷ್ಕರಿಸಿ ಅದರ ಮಿತಿಯನ್ನು ಹೆಚ್ಚಿಸುವ ಪ್ರಯತ್ನ ಕೂಡಾ ನಡೆದಿದೆ. ಜಾತಿ ಗಣತಿಯ ಜೊತೆಯಲ್ಲಿ ಈ ಪ್ರಕ್ರಿಯೆಯನ್ನು ಕೂಡಾ ಕೇಂದ್ರ ಸರ್ಕಾರ ಪೂರ್ಣಗೊಳಿಸಲಿದೆ ಎಂದು ನಂಬಿದ್ದೇನೆ ಎಂದರು.

ವೈಜ್ಞಾನಿಕವಾದ ಮೀಸಲಾತಿ ನೀತಿಯನ್ನು ರೂಪಿಸುವುದೇ ಜಾತಿ ಆಧಾರಿತ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಮೂಲ ಉದ್ದೇಶವಾಗಿದೆ.

# ಬಸವೇಶ್ವರರು ಮನುಕುಲಕ್ಕೆ ದಾರಿದೀಪ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿಶ್ವಗುರು ಬಸವಣ್ಣನವರು ವಚನಗಳ ಮೂಲಕ ಸಮಾಜದಲ್ಲಿರುವ ಅಜ್ಞಾನ, ಅಂಧಕಾರ, ಮೂಢನಂಬಿಕೆಗಳನ್ನು ಹೊಡೆದೋಡಿಸಿ ಮನುಕುಲಕ್ಕೆ ದಾರಿದೀಪವಾಗಿದ್ದಾರೆ ಎಂದು ತಹಸೀಲ್ದಾರ ವಾಸುದೇವ ವಿ.ಸ್ವಾಮಿ ಹೇಳಿದರು.

ಅವರು ಬುಧವಾರ ತಹಸೀಲ್ದಾರ ಕಚೇರಿಯಲ್ಲಿ ಬಸವೇಶ್ವರ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ಜಗಜ್ಯೋತಿ ಬಸವಣ್ಣನವರ ಭಾವಚಿತ್ರವಿಟ್ಟು ದೀಪ ಹಚ್ಚಿ, ಹೂವು ಹಾಕಿ ನಮಿಸುವುದರ ಜತೆಗೆ ಅವರ ವಚನ, ತತ್ವ ಸಿದ್ಧಾಂತಗಳನ್ನು ಎಲ್ಲರೂ ಓದಿ ಅರ್ಥೈಸಿ ಜೀವನದಲ್ಲಿ ಅಳವಡಿಸಿಕೊಂಡಲ್ಲಿ ಮಾತ್ರ ಅವರಿಗೆ ನಾವು ಗೌರವ ಕೊಟ್ಟಂತಾಗುತ್ತದೆ.

ಪ್ರತಿಯೊಬ್ಬರ ಜೀವನದಲ್ಲಿ ಬೆಳಕು ಮೂಡಲು ಬಸವಣ್ಣನವರ ಚಿಂತನೆ, ಸಂದೇಶ, ವಚನಗಳ ಅಧ್ಯಯನ ಅಗತ್ಯ. ಇದರಿಂದ ಜಗತ್ತಿನ ಭವಿಷ್ಯ ಜ್ಞಾನದತ್ತ ಬದಲಾವಣೆ ಆಗಲಿದೆ. ಅದರಿಂದ ರಾಷ್ಟ್ರವು ಶಕ್ತಿಯುತವಾಗಲಿದೆ. ವಚನ ಸಾಹಿತ್ಯದ ಮೂಲಕ ಸಾಮಾಜಿಕ ಕ್ರಾಂತಿಗೆ ಕಾರಣರಾದ ಅವರ ಜ್ಞಾನ ಭಂಡಾರದ ಬಗ್ಗೆ ವಿದೇಶಿಗರು ಆಕರ್ಷಿತರಾಗಿದ್ದು, ಭಾರತೀಯರು ಇತ್ತ ಚಿತ್ತ ಹರಿಸಬೇಕಾಗಿದೆ ಎಂದರು.

ಈ ವೇಳೆ ಚಿರಾಯು ಎಸ್.ಹೊತಗಿಮಠ ಹಾಗೂ ಪ್ರಭುಸ್ವಾಮಿ ಎಸ್.ಹೊತಗಿಮಠ ಸಹೋದರರು ಬಸವಣ್ಣನವರ ವೇಷಭೂಷಣದಲ್ಲಿ ಗಮನ ಸೆಳೆದರು.

ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ, ಪ್ರಶಾಂತ ಕಿಮಾಯಿ, ಜೆ.ಎ. ಮನಿಯಾರ, ಆರೋಗ್ಯ ಇಲಾಖೆಯ ಬಿ.ಎಸ್. ಹಿರೇಮಠ, ಕ.ರಾ.ಸ.ನೌ ಸಂಘದ ಅಧ್ಯಕ್ಷ ಗುರುರಾಜ ಹವಳದ, ಕೆ.ಎನ್. ಪಾಟೀಲ, ಡಿ.ಎಸ್. ಕುಲಕರ್ಣಿ, ಸುಬೇದಖಾನ ಪಠಾಣ, ಸುಷ್ಮಾ ಎನ್, ಸವಿತಾ ಕುಲಕರ್ಣಿ ಸೇರಿದಂತೆ ಸಿಬ್ಬಂದಿಗಳಿದ್ದರು.

### ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಮಿತಿಯಿಂದ ವಿಭಾಗ ಮಟ್ಟದ ಬೃಹತ್ ಸಮಾವೇಶ ಮೇ 26ಕ್ಕೆ

# ವಿಭಾಗ ಮಟ್ಟದ ಸಮಾವೇಶ ಯಶಸ್ವಿಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಮಿತಿಯಿಂದ ಸ್ಲಂ ಜನರ ಬಲಿಷ್ಠತೆ ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ಗದಗ ನಗರದಲ್ಲಿ ಮೇ 26ರಂದು ವಿಭಾಗ ಮಟ್ಟದ ಬೃಹತ್ ಸಮಾವೇಶ ಮತ್ತು ಸ್ಲಂ ಹಬ್ಬ ಹಮ್ಮಿಕೊಳ್ಳಲು ಉದ್ದೇಶಿಸಲಾಗಿದ್ದು, ಗದಗ-ಬೆಟಗೇರಿ ನಗರ ಸೇರಿದಂತೆ ವಿಭಾಗ ಮಟ್ಟದಲ್ಲಿ ಬರುವ ಎಲ್ಲಾ ಜಿಲ್ಲೆಗಳ ಸಂಘಟನೆ ಪದಾಧಿಕಾರಿಗಳು ಕಾರ್ಯಕ್ರಮದ ಯಶಸ್ವಿಗಾಗಿ ಶ್ರಮಿಸಬೇಕೆಂದು ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ವಿನಂತಿಸಿದರು.

ಅವರು ನಗರದ ಪ್ರವಾಸಿ ಮಂದಿರದಲ್ಲಿ ಸಮಾವೇಶದ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಿದ್ದರು. ಸ್ಲಂ ಜನಾಂದೋಲನ-ಕರ್ನಾಟಕ



ರಾಜ್ಯ ಸಮಿತಿ ಸಭೆಯಲ್ಲಿ ತೀರ್ಮಾನಿಸಿದಂತೆ ಗದಗ ನಗರದಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಸ್ಲಂ ಜನರ ಜ್ವಲಂತ ಸಮಸ್ಯೆಗಳಿಗೆ ಸರ್ಕಾರಗಳು ಪ್ರಾಮಾಣಿಕವಾಗಿ ಸ್ಪಂದಿಸಬೇಕೆಂದು ಸರ್ಕಾರದ ಗಮನಕ್ಕೆ ತರಲಾಗುತ್ತಿದೆ. ವಸತಿ, ಹಕ್ಕು-ಪತ್ರ, ನಾಗರಿಕ ಸೌಲಭ್ಯಗಳ ಜೊತೆಗೆ ಸ್ಲಂ ಜನರಿಗೆ ರಾಜ್ಯ ಸರ್ಕಾರ ಭೂಮಿ ಹಕ್ಕು ಖಾತ್ರಿಗೊಳಿಸಬೇಕೆಂದು ಸಮಾವೇಶದ ಮುಖಾಂತರ ಸರ್ಕಾರಕ್ಕೆ ಒತ್ತಾಯಿಸಲಾಗುವುದು. ವಿಭಾಗ ಮಟ್ಟದಲ್ಲಿ ಬರುವ ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ಹಾವೇರಿ, ಗದಗ-ಬೆಟಗೇರಿ, ಕೊಪ್ಪಳ, ಹೊಸಪೇಟ ನಗರಗಳ ಸ್ಲಂ ನಿವಾಸಿಗಳು ಸಾವಿರಾರು ಸಂಖ್ಯೆಯಲ್ಲಿ ಬಾಗವಹಿಸಿ ಸಮಾವೇಶವನ್ನು ಯಶಸ್ವಿಗೊಳಿಸಬೇಕೆಂದು ತಿಳಿಸಿದರು.

ಸಾವಿತ್ರಿಬಾ ಫುಲೆ ಹುಬ್ಬಳ್ಳಿ ಘಟಕದ ಸಂಚಾಲಕಿ ಶೋಭಾ ಕಮತರ ಮಾತನಾಡಿ, ನಮ್ಮ ವಿಭಾಗ ಮಟ್ಟದಲ್ಲಿರುವ ಎಲ್ಲಾ ಸಚಿವರಿಗೆ ಮತ್ತು ಶಾಸಕರಿಗೆ ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುವುದು. ಸಮಾವೇಶದ ಜೊತೆಗೆ ವಿಭಾಗ ಮಟ್ಟದ ಸ್ಲಂ ಹಬ್ಬವನ್ನು ಹಮ್ಮಿಕೊಂಡಿದೆ ಎಮದರು.

ಮಹಿಳಾ ಸಂಚಾಲಕಿ

ಹೊಸಪೇಟೆ ವಿಜಯನಗರ ಜಿಲ್ಲಾ ಸಮಿತಿ ಸಂಚಾಲಕಿ ವೆಂಕಮ್ಮ ಮಾತನಾಡಿ, ಮೇ 26ರಂದು ಹಮ್ಮಿಕೊಂಡಿರುವ ವಿಭಾಗ ಮಟ್ಟದ ಸಮಾವೇಶ ಮತ್ತು ಸ್ಲಂ ಹಬ್ಬ ಕಾರ್ಯಕ್ರಮದ ಪೂರ್ವಭಾವಿಯಾಗಿ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಬರುವ ಸ್ಲಂ ಪ್ರದೇಶಗಳಲ್ಲಿ ಸಭೆಗಳನ್ನು ನಡೆಸುವ ಮೂಲಕ ಕಾರ್ಯಕ್ರಮದ ಮಾಹಿತಿಯನ್ನು ನೀಡಬೇಕು, ವಿಭಾಗ ಮಟ್ಟದ ಸಮಾವೇಶ ಕಾರ್ಯಕ್ರಮ ಯಶಸ್ವಿಯಾಗಿ ನಡೆಸಲು ಎಲ್ಲರೂ ಒಗ್ಗೂಡಿ ಕೆಲಸ ಮಾಡಬೇಕು ಎಂದರು.

ಪರವೀನಬಾನು ಹವಾಲ್ದಾರ ಮಾತನಾಡಿ, ಗದಗ-ಬೆಟಗೇರಿ ನಗರದ ಎಲ್ಲಾ ಸ್ಲಂಗಳಲ್ಲಿ ಕಾರ್ಯಕ್ರಮದ ಕುರಿತು ಸಭೆಗಳನ್ನು ನಡೆಸುವ ಮೂಲಕ ಮಾಹಿತಿಯನ್ನು ನೀಡಿ ಕಾರ್ಯಕ್ರಮದ ಯಶಸ್ವಿಗಾಗಿ ಸಹಕಾರ ನೀಡಬೇಕು ಎಂದು ವಿನಂತಿಸಿದರು.

ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ ಪ್ರಸ್ತಾವಿಕವಾಗಿ ಮಾಡನಾಡಿದರು. ಸ್ಲಂ ಸಮಿತಿ ಮುಖಂಡರಾದ ಇಬ್ರಾಹಿಂ ಮುಲ್ಲಾ, ಶರಣಪ್ಪ ಸೂಡಿ, ಮೆಹಬೂಬಸಾಬ ಬಳ್ಳಾರಿ, ಖಾಜಾಸಾಬ ಇಸ್ಮಾಯಿಲನವರ, ಮೆಹರುನಿಸಾ ಡಂಬಳ, ಮಂಜುನಾಥ ಶ್ರೀಗಿರಿ, ಮೈಮುನ ಬೈರಕದಾರ, ಮುನ್ನಾ ಅಗಡಿ, ಮಕ್ತುಮಸಾಬ ಮುಲ್ಲಾನವರ, ವಿಲಾಸ ಗೋಸಾವಿ, ಮೆಹರುನಿಸಾ ಢಾಲಾಯತ, ದಾದು ಗೋಸಾವಿ, ಸಲೀಮ ಹರಿಹರ, ಮಹ್ಮದಸಾಬ ಗಡಾದ, ಆಯಿಸಾ ಉಮಚಗಿ, ವಿಶಾಲಕ್ಷಿ ಹಿರೇಗೌಡ್ರ, ರತ್ನವ್ವ ಗೌಡ್ರ, ಸಾಕ್ರುಬಾಯಿ ಗೋಸಾವಿ ಸೇರಿದಂತೆ ಪದಾಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# 93 ದಿನಗಳ ಬಳಿಕ ಜಾಮೀನು ಮಂಜೂರು: ಜೈಲಿನಿಂದ ಲಾಯರ್ ಜಗದೀಶ್ ರಿಲೀಸ್!

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಬಿಗ್ ಬಾಸ್ ಕನ್ನಡ ಸೀಸನ್ 11ರ ಮಾಜಿ ಸ್ಪರ್ಧಿ ಲಾಯರ್ ಜಗದೀಶ್ ಅವರು ಕೊನೆಗೂ ಜೈಲಿನಿಂದ ರಿಲೀಸ್ ಆಗಿದ್ದಾರೆ. ರಸ್ತೆಯಲ್ಲಿ ಅಣ್ಣಮ್ಮ ದೇವಿ ಕೂರಿಸಲು ವಿರೋಧಿಸಿದ್ದಕ್ಕೆ ಜಗದೀಶ್ ಮತ್ತು ಸ್ಥಳೀಯರ ನಡುವೆ ಜಗಳವಾಗಿತ್ತು. ಈ ಘಟನೆಗೆ ಸಂಬಂಧಿಸಿದಂತೆ ಲಾಯರ್ ಜಗದೀಶ್ ಹಾಗೂ ಗನ್ ಮ್ಯಾನ್‌ನನ್ನು ಜನವರಿ 25ರಂದು ಪೊಲೀಸರು ಬಂಧಿಸಿದ್ದರು. ಹೀಗಾಗಿ ಬಂಧನವಾಗಿದ್ದ ಲಾಯರ್ ಜಗದೀಶ್ ಇದೀಗ ಜೈಲಿನಿಂದ ಬಿಡುಗಡೆಯಾಗಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಂಚಿಕೊಂಡಿರುವ ಜಗದೀಶ್, ತಮ್ಮ ಬಂಧನಕ್ಕೆ ಸರ್ಕಾರ ಹಾಗೂ ಪೊಲೀಸ್ ವ್ಯವಸ್ಥೆಯನ್ನು ನೇರ ಹೊಣೆ ಮಾಡಿದ್ದಾರೆ. ಜಗದೀಶ್, ಜನವರಿ 24ರಂದು ಪೊಲೀಸರಿಂದ ಬಂಧನಕ್ಕೆ ಒಳಗಾಗಿದ್ದರು. ಬಂಧನವಾದ ದಿನ ಅವರು ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಅನ್ನು ಸಹ ಹಂಚಿಕೊಂಡಿದ್ದರು. ಇದೀಗ 93 ದಿನಗಳ ಬಳಿಕ ಅವರು ಜೈಲಿಂದ ಹೊರಬಂದಿದ್ದಾರೆ.

ಫೇಸ್‌ಬುಕ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಜಗದೀಶ್, ಹಲವು ವರ್ಷಗಳಿಂದ ಭ್ರಷ್ಟಾಚಾರದ ವಿರುದ್ಧ ಧೀರ ಹೋರಾಟ ನಡೆಸುತ್ತಿರುವ ಹೋರಾಟಗಾರ, ನಾನು, PSI ಹಗರಣವನ್ನು ಬಯಲು ಮಾಡಿದ್ದು , ADGP ಅಮೃತಪಾಲ್ ಅವರನ್ನು ಜೈಲಿಗೆ ಕಳಿಸಿದ್ದು ನಮ್ಮ ಟೀಂ, ದೊಡ್ಡ ರಾಜಕಾರಣಿಗಳ ಸೆಕ್ಸ್ ಸ್ಕ್ಯಾಂಡಲ್‌ನ್ನು ಬಹಿರಂಗಪಡಿಸಿದ್ದು , ರವಿ ಚೆನ್ನಣ್ಣನವರ ಭ್ರಷ್ಟಾಚಾರವನ್ನು ಬಹಿರಂಗಪಡಿಸಿದ್ದು , ಟ್ರಾಫಿಕ್ ಟೋವಿಂಗ್ ಸಿಸ್ಟಂ ಅನ್ನು ನಿಲ್ಲಿಸಿದ್ದು , ಕೊಡಿಗೇಹಳ್ಳಿ ಸುತ್ತಮುತ್ತ ಡ್ರಗ್ಸ್ ವಿರುದ್ಧ ಹೋರಾಟ ನಡೆಸಿದ್ದು , ಇವೆಲ್ಲವೂ ನನ್ನ ಹೋರಾಟದ ಭಾಗ' ಎಂದಿದ್ದಾರೆ ಜಗದೀಶ್. 'ಈ ಧೈರ್ಯದ ಹೋರಾಟವನ್ನು ಸಹಿಸದ ಭ್ರಷ್ಟ ರಾಜಕೀಯ ಮತ್ತು ಪೊಲೀಸ್ ವ್ಯವಸ್ಥೆ, ನನ್ನ ಮತ್ತು ನನ್ನ ಮಗನ ವಿರುದ್ಧ ಸಂಚು ರೂಪಿಸಿ, 25/01/2025 ರಂದು ಸ್ಥಳಿಯ ಪುಂಡರಿಂದ ನನಗೆ ಮಾರಣಾಂತಿಕ ಹಲ್ಲೆ ನಡೆಸಿ, ಅಕ್ರಮವಾಗಿ ಜೈಲಿಗೆ ಕಳುಹಿಸಲಾಗಿತ್ತು. ಇವತ್ತಿಗೆ 93 ದಿನಗಳ ನಂತರ ನನಗೆ ನ್ಯಾಯ ಸಿಕ್ಕಿದೆ. ಜಾಮೀನು ಲಭಿಸಿದೆ. ನ್ಯಾಯಕ್ಕಾಗಿ ನನ್ನ ಹೋರಾಟ ಇನ್ನೂ ಜೀವಂತವಿದೆ, ನಾನು ಶರಣಾಗುವುದಿಲ್ಲ' ಎಂದು ಬರೆದುಕೊಂಡಿದ್ದಾರೆ.

### ಬಸವ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅಭಿಪ್ರಾಯ

# ರಾಜ್ಯದ ಪ್ರಗತಿಗೆ ಬಸವಣ್ಣನವರ ಕೊಡುಗೆ ಅಪಾರ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

12ನೇ ಶತಮಾನದ ಬಸವಣ್ಣನವರ ವಿಚಾರಧಾರೆಗಳು, ಸಾಮಾಜಿಕ ಸುಧಾರಣೆಗಳು ಅವರ ಅನುಭವ ಮಂಟಪ, ವಚನಗಳ ಮೂಲಕ ಜಾರಿಗೆ ಬಂದರೆ, ಬಸವಣ್ಣನವರ ಮಹಾನ್ ತತ್ವಗಳನ್ನು ಅನುಸರಿಸುವಂತೆ ಡಾ. ಬಾಬಾಸಾಹೇಬ ಅಂಬೇಡ್ಕರರು ಭಾರತಕ್ಕೆ ಸಂವಿಧಾನ ನೀಡಿದ್ದಾರೆ. ಸಮಾನತೆ, ಸ್ತ್ರೀ ಸ್ವಾತಂತ್ರ್ಯ, ಲಿಂಗ ಸಮಾನತೆಯಂತಹ ಕ್ರಾಂತಿಕಾರ ವಿಚಾರಗಳನ್ನು ಅವಲೋಕಿಸಿದಾಗ ಇಬ್ಬರು ಮಹಾತ್ಮರಲ್ಲಿ ಸಾಮ್ಯತೆ ಕಾಣುತ್ತದೆ ಎಂದು ಕಾರ್ಮಿಕ ಇಲಾಖೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಹೇಳಿದರು.

ಅವರು ಬುಧವಾರ ಸಂಜೆ ನಗರದ ಆಲೂರು ವೆಂಕಟರಾವ್ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತವಾಗಿ ಆಯೋಜಿಸಿದ್ದ ಕರ್ನಾಟಕ ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.




ಬಸವಣ್ಣನವರು ಸಮಾನತೆ, ಲಿಂಗ ಸಮಾನತೆ, ಮಹಿಳಾ ಸ್ವಾತಂತ್ರ್ಯ ಸೇರಿದಂತೆ ಅನೇಕ ಸಾಮಾಜಿಕ ಸುಧಾರಣೆಗಳನ್ನು ಪ್ರತಿಪಾದಿಸಿದ್ದರು. ಡಾ. ಅಂಬೇಡ್ಕರ್ ಅವರು ಈ ಎಲ್ಲ ಅಂಶಗಳನ್ನು ಸಂವಿಧಾನದಲ್ಲಿ ಸೇರಿಸಿದ್ದಾರೆ. ಆದ್ದರಿಂದ ಇಬ್ಬರ ವಿಚಾರಗಳಲ್ಲೂ ಸಾಮ್ಯತೆ ಇದೆ ಎಂದು ಅವರು ಅಭಿಪ್ರಾಯಪಟ್ಟರು.

ಬಸವಣ್ಣನವರ ನಡೆ-ನುಡಿಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಬಸವಣ್ಣನವರ ಬೋಧನೆಗಳನ್ನು ಸಮಕಾಲೀನ ಸಂಗತಿಗಳೊಂದಿಗೆ ಹೋಲಿಕೆ ಮಾಡಿ ವಿಶ್ಲೇಷಿಸಿ, ಅವರ ವಿಚಾರಗಳನ್ನು ಮನೆಮನೆಗೆ ಮುಟ್ಟಿಸುವ ಕೆಲಸವಾಗಬೇಕು ಎಂದು ಸಚಿವ ಸಂತೋಷ ಲಾಡ್ ಹೇಳಿದರು.

ಮಾಜಿ ಶಾಸಕ, ಕರ್ನಾಟಕ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಚಂದ್ರಕಾಂತ ಬೆಲ್ಲದ ಮಾತನಾಡಿ, ಬಸವಣ್ಣನವರ ಬದುಕು ನಮಗೆಲ್ಲ ಮಾದರಿಯಾಗಿದೆ. ಅವರ ಜೀವನ ಸಂದೇಶ ನಮಗೆ ದಾರಿದೀಪವಾಗಬೇಕು ಎಂದರು.

ಡಾ. ಎಂ.ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದ ಅಧ್ಯಕ್ಷ ಪ್ರೊ. ವೀರಣ್ಣ ರಾಜೂರ ಮಾತನಾಡಿದರು. ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿದರು.

ಧಾರವಾಡ ಸರಕಾರಿ ಪ್ರಥಮದರ್ಜೆ ಕಾಲೇಜಿನ ಕನ್ನಡ ಸಹ ಪ್ರಾಧ್ಯಾಪಕ ಡಾ. ಗಿರೀಶ ದೇಸೂರ ಬಸವೇಶ್ವರರ ಕುರಿತು ವಿಶೇಷ ಉಪನ್ಯಾಸ ನೀಡಿದರು. ವೇದಿಕೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ, ಧಾರವಾಡ ರಂಗಾಯಣ ನಿರ್ದೇಶಕ ರಾಜು ತಾಳಿಕೋಟಿ, ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ, ಜಿ.ಪಂ ಉಪಕಾರ್ಯದರ್ಶಿ ಬಿ.ಎಸ್. ಮೂಗನೂರಮಠ, ಧಾರವಾಡ ತಹಸೀಲ್ದಾರ ಡಿ.ಎಚ್. ಹೂಗಾರ, ಸಮಾಜದ ಮುಖಂಡರಾದ ಸಿದ್ರಾಮಣ್ಣ ನಡಕಟ್ಟಿ, ಎನ್.ಬಿ. ಗೊಲ್ಲನ್ನವರ ಇದ್ದರು.

ಸಂಗೀತ ವಿದ್ವಾಂಸ ಡಾ. ಕೈವಲ್ಯಕುಮಾರ ಗುರುವ ಸುಮುಧರ ವಚನ ಗಾಯನ ಕಾರ್ಯಕ್ರಮ ನಡೆಸಿಕೊಟ್ಟರು. ರವಿ ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ಕಾರ್ಯಕ್ರಮದಲ್ಲಿ ಬಸವ ಅನುಯಾಯಿಗಳು, ಅಭಿಮಾನಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

> ಬಸವಣ್ಣನವರು ವಚನಗಳ ಮೂಲಕ ಸಮಾಜದಲ್ಲಿ ಜಾಗೃತಿ ಮೂಡಿಸಿದರು. ಅನುಭವ ಮಂಟಪದ ಮೂಲಕ ಸಮಾಜದಲ್ಲಿ ಸಮಾನತೆ ತರಲು ಪ್ರಯತ್ನಿಸಿದರು. ಕರ್ನಾಟಕದ ಇಂದಿನ ಪ್ರಗತಿ, ಅಭಿವೃದ್ಧಿಗೆ ಬಸವಣ್ಣನವರ ಕೊಡುಗೆ ಅಧಿಕವಾಗಿದೆ. ಕನ್ನಡ ನಾಡಿನ ಇತಿಹಾಸವನ್ನು ನಾವು ಅವಲೋಕಿಸಿದಾಗ ಬಸವ ಪ್ರಣೀತವಾದ ಲಿಂಗಾಯತ ಮತ್ತು ಒಕ್ಕಲಿಗ ಸಮುದಾಯ ನಾಡಿನ ಅಭಿವೃದ್ಧಿಗೆ ಅನ್ನ ಮತ್ತು ಅಕ್ಷರ ದಾಸೋಹ ಎರಡನ್ನೂ ನೀಡಿದೆ. ಈ ಪರಂಪರೆಯನ್ನು ನಾವು ಬೇರೆ ರಾಜ್ಯದಲ್ಲಿ ಕಾಣಲು ಸಾಧ್ಯವಾಗುವದಿಲ್ಲ.
>
> **– ಸಂತೋಷ್ ಲಾಡ್.**
> ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರು.

### ಕ.ಸಾ.ಪ ಮಾಸದ ಮಾತು ಮಾಲಿಕೆಯ ಕಾರ್ಯಕ್ರಮದಲ್ಲಿ ಡಾ. ಶಿವಾನಂದ ಹೂವಿನ್ ಅಭಿಪ್ರಾಯ

# ಬಸವೇಶ್ವರರು ಈ ನಾಡಿನ ಆಸ್ತಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬಸವಣ್ಣನವರು ಅಂದಿನ ದಿನಗಳಲ್ಲಿ ನೀಡಿದ ಒಂದೊಂದು ವಾಕ್ಯಗಳು ಇಂದಿನ ಜಗತ್ತಿಗೆ ಹೇಳಿ ಮಾಡಿಸಿದಂತಿವೆ. ಅವರ ನುಡಿಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಕಾರ್ಯವಾಗಬೇಕಾಗಿದೆ ಎಂದು ಹಿರಿಯ ವೈದ್ಯ ಡಾ. ಶಿವಾನಂದ ಹೂವಿನ್ ಅಭಿಪ್ರಾಯಪಟ್ಟರು.

ಅವರು ಲಕ್ಷ್ಮೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ಮಾಸದ ಮಾತು ಮಾಲಿಕೆಯ 21ನೇ ಕಾರ್ಯಕ್ರಮದಲ್ಲಿ ಉನ್ನತಿ ಕಂಪ್ಯೂಟರ್ ಎಜುಕೇಶನ್ ಸಂಸ್ಥೆಯಲ್ಲಿ ಹಮ್ಮಿಕೊಂಡ ಬಸವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಬಸವೇಶ್ವರರು ನಾಡಿನ ಆಸ್ತಿ. ಅವರು ಯಾವುದೇ ಒಂದು ಜಾತಿ, ಮತ, ಪಂಥಕ್ಕೆ ಸೀಮಿತವಲ್ಲ.




ಇಡೀ ಮನುಕುಲಕ್ಕೆ ಅವರು ದೈವಸ್ವರೂಪರಿದ್ದಂತೆ. ಬಸವಣ್ಣನವರ ವಿಚಾರಗಳು ಸೂರ್ಯ, ಚಂದ್ರ ಇರುವವರೆಗೂ ಕೂಡ ಪ್ರಸ್ತುತ. ಮನುಷ್ಯತ್ವದ ಆಧಾರದ ಮೇಲೆ ಈ ಸಮಾಜದ ಸಂಸ್ಕೃತಿ ಮತ್ತು ನಾಗರಿಕತೆ ನಿರ್ಮಾಣವಾಗಬೇಕು ಎಂಬುದು ಅವರ ಧ್ಯೇಯವಾಗಿತ್ತು ಎಂದು ಹೇಳಿದರು.

ಇನ್ನೋರ್ವ ಅತಿಥಿ ಡಾ. ನಾಗರಾಜ ವಾಲಿ ಮಾತನಾಡಿ, ಇಡೀ ಜಗತ್ತಿಗೆ ಪ್ರಜಾಪ್ರಭುತ್ವದ ಕಲ್ಪನೆ ಕೊಟ್ಟಿದ್ದು ಬಸವೇಶ್ವರರು. ಅನುಭವ ಮಂಟಪವೇ ಇಂದಿನ ಸಂಸತ್ತಿಗೆ ಮೂಲಾಧಾರ. ಬಸವಣ್ಣನವರು ಸಮ ಸಮಾಜ ನಿರ್ಮಾಣಕ್ಕೆ ನಾಂದಿ ಹಾಡಿದವರು ಎಂದು ಹೇಳಿದರು.

> ಪ್ರಾಸ್ತಾವಿಕ ಮಾತನಾಡಿದ ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ, ಬಸವಣ್ಣ ಎಲ್ಲಾ ಕ್ಷೇತ್ರಗಳಲ್ಲಿಯೂ ಅನ್ವಯವಾಗುವ ವಚನಗಳನ್ನು ಎಲ್ಲರಿಗೂ ಪಚನವಾಗುವ ಹಾಗೆ ಸರಳ ಕನ್ನಡ ಭಾಷೆಯಲ್ಲಿ ಹೇಳಿ ಕನ್ನಡ ಭಾಷೆಗೆ ವಿಶೇಷ ಸ್ಥಾನಮಾನ ಕಲ್ಪಿಸಿದರು ಎಂದರು.

ಮಂಜುನಾಥ ಬಂಡಿವಾಡ ಮತ್ತು ಬಸವರಾಜ ಶೆಟ್ಟರ್ ಮಾತನಾಡಿ, ಪ್ರಸ್ತುತ ಸನ್ನಿವೇಶದಲ್ಲಿ ಬಸವ ವಿಚಾರಗಳು ಅತ್ಯಂತ ಮಹತ್ವ ಪಡೆದುಕೊಂಡಿವೆ. ಇಂದಿನ ಎಲ್ಲ ಸಮಸ್ಯೆಗಳಿಗೆ ಬಸವ ವಿಚಾರಗಳಲ್ಲಿ ಉತ್ತರಗಳಿವೆ. ಸಮ ಸಮಾಜದ ನಿರ್ಮಾಣಕ್ಕಾಗಿ ಶ್ರಮಿಸಿದ ಬಸವಾದಿ ಶಿವಶರಣರು ಇಂದಿನ ಆದರ್ಶವಾಗಬೇಕು ಎಂದರು.

ಶಿಕ್ಷಕ ಮೃತ್ಯುಂಜಯ ಹಿರೇಮಠ ಮಾತನಾಡಿದರು. ಮುಖ್ಯ ಅತಿಥಿಗಳಾದ ಶಿಕ್ಷಕ ಸಂಗಮೇಶ ಅಂಗಡಿ, ಮಹಾದೇವ ಧರಣಿ ವೇದಿಕೆಯಲ್ಲಿದ್ದರು. ವಿದ್ಯಾರ್ಥಿನಿಯರಾದ ಚಂದನಾ ಕಳಸಾಪುರ, ವಿನುತಾ ಘೋರ್ಪಡೆ, ಸುಶ್ಮಿತಾ ರೆಡ್ಡೇರ ಬಸವಣ್ಣನ ವಚನಗಳ ಗಾಯನ ಕಾರ್ಯಕ್ರಮ ನಡೆಸಿಕೊಟ್ಟರು. ಕಸಾಪ ಗೌರವ ಕಾರ್ಯದರ್ಶಿ ಮಂಜುನಾಥ ಚಾಕಲಬ್ಬಿ ನಿರೂಪಿಸಿದರು. ಸಂಘಟನಾ ಕಾರ್ಯದರ್ಶಿ ನಾಗರಾಜ ಮಜ್ಜಿಗುಡ್ಡ ಸ್ವಾಗತಿಸಿದರು. ಐ.ಎ. ಬಳಿಗಾರ ವಂದಿಸಿದರು. ಈರಣ್ಣ ಗಾಣಿಗೇರ ಈರಣ್ಣ ರಿತ್ತಿ, ನಾಗರಾಜ ಎಂಡಿಗೇರಿ, ರಮೇಶ ಗಿಣಿ, ಕಾರ್ತಿಕ ನರೇಗಲ್ ಮುಂತಾದವರು ಹಾಜರಿದ್ದರು.

## ಪಾಕಿಸ್ತಾನಕ್ಕೆ ಜೈಕಾರ ಹಾಕುವವರಿಗೆ ಚಪ್ಪಲಿಯಿಂದ ಹೊಡೆಯಿರಿ: ಶಾಸಕ ಯತ್ನಾಳ್

**■ವಿಜಯಸಾಕ್ಷಿ ಸುದ್ದಿ, ವಿಜಯಪುರ**



ಪಾಕಿಸ್ತಾನಕ್ಕೆ ಜೈಕಾರ ಹಾಕುವವರಿಗೆ ಚಪ್ಪಲಿಯಿಂದ ಹೊಡೆಯಿರಿ ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಹೇಳಿಕೆ ನೀಡಿದ್ದಾರೆ. ವಿಜಯಪುರ ನಗರದಲ್ಲಿ ಮಾತನಾಡಿದ ಅವರು, ನನ್ನ ವಿರುದ್ಧ ನಡೆಸಿದ್ದ ಪ್ರತಿಭಟನೆಯಲ್ಲಿ ಪಾಲ್ಗೊಂಡವರು ಯಾರಾದರೂ ಭಾರತ ಮಾತಾಕಿ ಜೈ ಅಂದ್ರಾ, ಪಾಕಿಸ್ತಾನಕ್ಕೆ ಧಿಕ್ಕಾರ ಕೂಗಿದ್ದಾರಾ? ಕಾಂಗ್ರೆಸ್ ಸಚಿವ, ಶಾಸಕರನ್ನು ಮುಸ್ಲಿಂ ಮುಖಂಡರು ಬ್ಲಾಕ್‌ಮೇಲ್ ಮಾಡಿದ್ದಾರೆ. ಪಾಕಿಸ್ತಾನಕ್ಕೆ ಜೈಕಾರ ಹಾಕುವವರಿಗೆ ಚಪ್ಪಲಿಯಿಂದ ಹೊಡೆಯಿರಿ. ಅವರ ಪರವಾಗಿ ನಾನು ಇರುತ್ತೇನೆ. ಅವರ ವಕಾಲತ್ತು ನಾನು ನೋಡಿಕೊಳುತ್ತೇನೆ ಎಂದರು.

ಇನ್ನೂ ಮಹಮ್ಮದ್ ಪೈಗಂಬರ್ ವಿರುದ್ಧ ಅವಹೇಳನಕಾರಿಯಾಗಿ ಮಾತನಾಡಿದ್ದಾರೆಂದು ಆರೋಪಿಸಿ ತಮ್ಮ ವಿರುದ್ಧ ಪ್ರತಿಭಟನೆ ನಡೆಸಿದ್ದ ಸಚಿವ ಹಾಗೂ ಶಾಸಕರ ವಿಚಾರವಾಗಿ ಮಾತನಾಡಿ, ಅವನು ಶಿವಾನಂದ ಪಾಟೀಲ್ ಅಲ್ಲ, ಅವನು ಶಿವಾನಂದ ಹಚಡದ.

ಅವನಿಗೆ ತಾಕತ್ ಇದ್ದರೆ ಬಸವನ ಬಾಗೇವಾಡಿ ಕ್ಷೇತ್ರದ ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಟ್ಟು, ನನ್ನ ವಿರುದ್ಧ ಸ್ಪರ್ಧಿಸಲಿ. ಮುಂದಿನ ಶುಕ್ರವಾರದೊಳಗೆ ರಾಜೀನಾಮೆ ಕೊಡಲಿ, ನಿಮ್ಮ ಮತಕ್ಷೇತ್ರದಲ್ಲೇ ಪಕ್ಷೇತರವಾಗಿ ನಿಂತು ಆರಿಸಿ ಬರುತ್ತೇನೆ ಎಂದು ಕಿಡಿಕಾರಿದರು.

# ಎಲೆಕ್ಟ್ರಾನಿಕ್ ಮೀಡಿಯಾ ಜರ್ನಲಿಸ್ಟ್ ಸಂಘ ಅಸ್ತಿತ್ವಕ್ಕೆ



**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡದಲ್ಲಿರುವ ಎಲೆಕ್ಟ್ರಾನಿಕ್ ಮಾಧ್ಯಮದ ಸಹೋದ್ಯೋಗಿಗಳನ್ನು ಸಂಘಟಿಸುವ ದೃಷ್ಟಿಯಿಂದ ಧಾರವಾಡ ಜಿಲ್ಲಾ ಎಲೆಕ್ಟ್ರಾನಿಕ್ ಮೀಡಿಯಾ ಜರ್ನಲಿಸ್ಟ್ ಅಸೋಸಿಯೇಷನ್ ಎಂಬ ಸಂಘವನ್ನು ರಚಿಸಲಾಗಿದ್ದು, ಸಂಘದ ಮೊದಲನೇ ಸಭೆಯಲ್ಲಿ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಇದು ಧಾರವಾಡದ ಟಿವಿ ಮಾಧ್ಯಮಗಳಿಗೆ ಸೇರಿದ ಅಧಿಕೃತ ಸಂಘವಾಗಿದೆ.

ಸಂಘದ ಅಧ್ಯಕ್ಷರಾಗಿ ನರಸಿಂಹಮೂರ್ತಿ ಪ್ಯಾಟಿ, ಉಪಾಧ್ಯಕ್ಷರಾಗಿ ಜಾವಿದ್ ಅಧೋನಿ, ಪ್ರಧಾನ ಕಾರ್ಯದರ್ಶಿಯಾಗಿ ಡಿ.ವಿ. ಕಮ್ಮಾರ್, ಕಾರ್ಯದರ್ಶಿಯಾಗಿ ಪ್ರಶಾಂತ ದಿನ್ನಿ ಹಾಗೂ ಖಜಾಂಚಿಯಾಗಿ ಗುರುನಾಥ ಕಟ್ಟಿಮನಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಸಂಘದ ಪ್ರಕಟಣೆ ತಿಳಿಸಿದೆ.

### 1.20 ಕೋಟಿ ರೂ ವೆಚ್ಚದ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಗ್ರಾಮೀಣ ಭಾಗಗಳ ಅಭಿವೃದ್ಧಿಗೆ ಒತ್ತು

**■ವಿಜಯಸಾಕ್ಷಿ ಸುದ್ದಿ, ರೋಣ**

ಮತಕ್ಷೇತ್ರದ ಗ್ರಾಮೀಣ ಭಾಗಗಳ ಸೌಂದರ್ಯಕ್ಕೆ ಹೆಚ್ಚಿನ ಒತ್ತು ನೀಡಲಾಗಿದ್ದು, ಈ ದಿಶೆಯಲ್ಲಿ ಸವಡಿ ಗ್ರಾಮದಲ್ಲಿ 90 ಲಕ್ಷ ರೂ ವೆಚ್ಚದಲ್ಲಿ ಸಿಸಿ ರಸ್ತೆ ಹಾಗೂ ಅರಹುಣಸಿ ಗ್ರಾಮದಲ್ಲಿ 30 ಲಕ್ಷ ರೂ ವೆಚ್ಚದಲ್ಲಿ ಸಿಸಿ ರಸ್ತೆ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಬುಧವಾರ ಸವಡಿ ಗ್ರಾಮದಲ್ಲಿ ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.



ಸವಡಿ ಗ್ರಾಮದ ಕಾಳಿಕಾದೇವಿ ಸಭಾಭವನ ನಿರ್ಮಾಣಕ್ಕೆ ಶಾಸಕರ ಅನುದಾನದಿಂದ 5 ಲಕ್ಷ ರೂಗಳನ್ನು ಬಿಡುಗಡೆಗೊಳಿಸಿದೆ. ಮುಖ್ಯವಾಗಿ ಸ್ಮಶಾನ ಅಭಿವೃದ್ಧಿ ಕುರಿತು ಗ್ರಾ.ಪಂ ಸದಸ್ಯರು ಉತ್ತಮ ನಿರ್ಧಾರ ಕೈಗೊಂಡಿದ್ದು ಸ್ವಾಗತಾರ್ಹ ಎಂದರು.

ಅರಹುಣಸಿ ಗ್ರಾಮದ ರಸ್ತೆ ಸುಧಾರಿಸಲು ಅಗತ್ಯ ಕ್ರಮ ಕೈಗೊಂಡಿದ್ದು, ಕೆಲ ದಿನಗಳಲ್ಲಿ ರಸ್ತೆ ಕಾಮಗಾರಿಗೆ ಚಾಲನೆ ನೀಡಲಾಗುವುದು. ಗ್ರಾಮದ ಸರಕಾರಿ ಶಾಲೆಗೆ 2 ನೂತನ ಕೊಠಡಿಗಳನ್ನು ಮಂಜೂರು ಮಾಡಲಾಗಿದ್ದು, ಕಟ್ಟಡ ಕಾಮಗಾರಿ ನಿರ್ಮಾಣ ಕಾರ್ಯ ಶೀಘ್ರದಲ್ಲಿಯೇ ಆರಂಭವಾಗಲಿದೆ ಎಂದರು. ಬಸವರಾಜ ನವಲಗುಂದ, ಯೂಸುಫ್ ಇಟಗಿ, ವಿ.ಬಿ. ಸೋಮನಕಟ್ಟಿಮಠ, ಅಭಿಷೇಕ ನವಲಗುಂದ ಸೇರಿದಂತೆ ಸವಡಿ ಹಾಗೂ ಅರಹುಣಸಿ ಗ್ರಾ.ಪಂ ಸದಸ್ಯರು, ಮುಖಂಡರು, ಗ್ರಾಮಸ್ಥರಿದ್ದರು.

> ಸವಡಿ ಗ್ರಾಮದಲ್ಲಿ ಶಾದಿ ಮಹಲ್ ನಿರ್ಮಾಣಕ್ಕೆ 1 ಕೋಟಿ ರೂ ಅನುದಾನ ಮಂಜೂರಾಗಿದ್ದು, ಗ್ರಾಮಸ್ಥರ ಇಚ್ಛೆಯಂತೆ ದೊಡ್ಡ ಕಾರ್ಯಕ್ರಮವನ್ನು ಆಯೋಜಿಸಿ, ಸಚಿವರುಗಳನ್ನು ಸಭೆಗೆ ಆಹ್ವಾನಿಸಿ, ಶೀಘ್ರವೇ ಶಾದಿ ಮಹಲ್ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡಲಾಗುವುದು.
>
> **– ಜಿ.ಎಸ್. ಪಾಟೀಲ.**
> ಶಾಸಕರು, ರೋಣ.

# ಸಂಭ್ರಮದ ಜೋಡೆತ್ತುಗಳ ಮೆರವಣಿಗೆ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಓಕಳಿ ಬಂಡೆಯಲ್ಲಿ ಆಂಜನೇಯ ಭಾವಚಿತ್ರ ಮತ್ತು ಬಸವ ಜಯಂತಿ ನಿಮಿತ್ತ ಜೋಡೆತ್ತುಗಳ ಮೆರವಣಿಗೆ ಬುಧವಾರ ಸಂಭ್ರಮದಿಂದ ನೆರವೇರಿತು. ಡಂಬಳ ಗ್ರಾಮದ ಯುವಕರ ಆಶ್ರಯದಲ್ಲಿ ಗ್ರಾಮದ ರೈತರು ತಮ್ಮ ಜೋಡೆತ್ತುಗಳ ಮೆರವಣಿಗೆ ಮಾಡಿದರು.

ರೈತರು ಎತ್ತು, ಹೋರಿ, ಆಕಳುಗಳನ್ನು ಸಿಂಗರಿಸಿ, ಕೊರಳಿಗೆ



ಹುರಿಗೆಜ್ಜೆ, ಕಿರುಗಂಟೆಗಳ ಸರ ಹಾಕಿ ಸಿಂಗರಿಸಿದ್ದರು. ಗಳೆ, ನೊಗ, ಗಾಡಿ, ಹಗ್ಗ, ಪಲಗ, ದಿಂಡು ಮಂತಾದ ಕೃಷಿ ಸಲಕರಣೆಗಳನ್ನು ಸಜ್ಜುಗೊಳಿಸಿ ಪೂಜೆ ಮಾಡಿದರು. ಹಾಲೇಶ್ವರ ಗದ್ದುಗೆಯ ಆವರಣದಲ್ಲಿ ಗೋಧಿ ಹುಗ್ಗಿ ಅನ್ನ ಸಂತರ್ಪಣೆ ಜರುಗಿತು. ಈ ಸಂದರ್ಭದಲ್ಲಿ ಗೋಣಿಬಸಪ್ಪ ಕೊರ್ಲಹಳ್ಳಿ, ರಮೇಶ ಹೊಂಬಳ, ಹಾಲಪ್ಪ ಡೊಳ್ಳಿನ, ಸಣ್ಣ ಹನುಮಪ್ಪ ಬಂಡಿ, ರಾಮಪ್ಪ ಪೂಜಾರಿ, ರಾಮಪ್ಪ ಹೊಂಬಾಳ, ಹನುಮಪ್ಪ ರಾಘಣ್ಣನವರ್, ಸೋಮಪ್ಪ ಗಿರಾಗತಿ, ಬೀರಪ್ಪ ಪೂಜಾರ, ಕೆಂಚಪ್ಪ ಡೊಳ್ಳಿನ, ಸಿದ್ದಪ್ಪ ಹೊಂಬಾಳ, ಕುಬೇರಪ್ಪ ಕವಲಿ, ಬಸವರಾಜ್ ಕವಲಿ, ಸಿದ್ದಪ್ಪ ಮಂಗೋಜಿ, ಭರ್ಮಪ್ಪ ಕೋತಂಬರಿ, ಭೀಮಪ್ಪ ಕಿತ್ತೂರ, ಹನುಮಪ್ಪ ಪಲ್ಲೇದ, ಗುರಪ್ಪ ಬಂಡಿ, ಗುರಪ್ಪ ಮಂಗೋಜಿ, ರೇವಣಸಿದ್ದಪ್ಪ ಕರಿಗಾರ, ಸಿದ್ದಪ್ಪ ಹೊಂಬಾಳ, ರವಿ ಆಲೂರ, ಸಿದ್ದಪ್ಪ ಪಲ್ಲೇದ, ಕರಿಯಪ್ಪ ಪಲ್ಲೀರ್, ಬಸಪ್ಪ ಕರಿಗಾರ, ಹೊಂಬಾಳ ಎಲ್ಲಪ್ಪ ಕರಿಗಾರ, ರಾಮಪ್ಪ ಚವಡಕಿ ಸೇರಿದಂತೆ ಗ್ರಾಮದ ಹಿರಿಯರು, ಯುವಕರು ಇದ್ದರು.

## ಕರ್ನಾಟಕದ 15ಕ್ಕೂ ಅಧಿಕ ಜಿಲ್ಲೆಗಳಲ್ಲಿ ಮೇ. 6 ರವರೆಗೂ ಭಾರೀ ಮಳೆ!

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯದ 15ಕ್ಕೂ ಅಧಿಕ ಜಿಲ್ಲೆಗಳಲ್ಲಿ ಮೇ. 6 ರವರೆಗೂ ಭಾರೀ ಮಳೆ ಆಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ಕೊಟ್ಟಿದೆ.

ದಕ್ಷಿಣ ಕನ್ನಡ, ಬೆಳಗಾವಿ, ಧಾರವಾಡ, ಗದಗ, ಕೊಪ್ಪಳ, ರಾಯಚೂರು, ಯಾದಗಿರಿ, ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಮಗಳೂರು, ಹಾಸನ, ಕೊಡಗು, ಮಂಡ್ಯ, ಮೈಸೂರು, ತುಮಕೂರು, ವಿಜಯನಗರದಲ್ಲಿ ಮಳೆಯಾಗಲಿದೆ.

ಶಿವಮೊಗ್ಗ, ರಾಮನಗರ, ಕೋಲಾರ, ದಾವಣಗೆರೆ, ಚಿತ್ರದುರ್ಗ, ಚಿಕ್ಕಬಳ್ಳಾಪುರ, ವಿಜಯಪುರ, ಕಲಬುರಗಿ, ಹಾವೇರಿ, ಬೀದರ್, ಬಾಗಲಕೋಟೆ, ಉತ್ತರ ಕನ್ನಡ, ಉಡುಪಿಯಲ್ಲಿ ಒಣಹವೆ ಇರಲಿದೆ.

ಧಾರವಾಡದಲ್ಲಿ 34.6 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ,21.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಗದಗದಲ್ಲಿ 35.6 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 22.4 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕಲಬುರಗಿಯಲ್ಲಿ 39.8 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 27.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಹಾವೇರಿಯಲ್ಲಿ 34.8ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 23.4 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕೊಪ್ಪಳದಲ್ಲಿ 36.1 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 25.7 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ರಾಯಚೂರಿನಲ್ಲಿ 37.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 25.6 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka